# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 181 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 06–02–2025 ಗುರುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 181 | RNI No: KARKAN/2023/88462 | KA/SK/CTA-874/2024-2026 | Chitradurga | Date: 06-02-2025 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಚಿಕ್ಕಪುರ ಗೊಲ್ಲರಹಟ್ಟಿ: ಮೌಢ್ಯ ಪದ್ಧತಿ ನಿರ್ಮೂಲನೆ ಕುರಿತು ಅರಿವು 2

ಏಡ್ಸ್ ರೋಗಿಯನ್ನು ಸಮಾನವಾಗಿ ಕಾಣಿರಿ: ಜಿಲ್ಲಾಧಿಕಾರಿ 3

ಪಕ್ಷ ಸಂಘಟನೆ ನಿರಂತರವಾಗಿರಲಿ: ಮಯೂರ ಜಯಕುಮಾರ್ 4



ಸುದ್ದಿ, ಜಾಹಿರಾತಿಗೆ 9686622252


ಫಾಸ್ಟ್ ನ್ಯೂಸ್

## ಸಹಕಾರ ಸಂಘಗಳು ಲೆಕ್ಕಪರಿಶೋಧಕರ ಮಾಹಿತಿ ಸಲ್ಲಿಸಲು ಸೂಚನೆ

» ಚಿತ್ರದುರ್ಗ

ಕರ್ನಾಟಕ ಸಹಕಾರ ಸಂಘಗಳ ನಿಯಮಗಳು 1960 ನಿಯಮ 29–ಬಿ(8) ರನ್ವಯ ಯಾವುದೇ ಸಹಕಾರ ಸಂಘದ ಮುಖ್ಯಕಾರ್ಯನಿರ್ವಾಹಕರು ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ನಿಯಮಗಳು 2004 ನಿಯಮ 8–ಬಿ(8) ರನ್ವಯ ಯಾವುದೇ ಸೌಹಾರ್ದ ಸಹಕಾರಿಯ ಮುಖ್ಯ ಕಾರ್ಯನಿರ್ವಾಹಕರು ವಾರ್ಷಿಕ ಮಹಾ ಸಭೆಯಲ್ಲಿ ಲೆಕ್ಕಪರಿಶೋಧಕರ ಅಥವಾ ಲೆಕ್ಕಪರಿಶೋಧನಾ ಫರ್ಮ್‌ನ್ನು ನೇಮಕ ಮಾಡಿಕೊಂಡ ಬಗ್ಗೆ ವಾರ್ಷಿಕ ಮಹಾಸಭೆಯ ದಿನಾಂಕದಿಂದ 7 ದಿನಗಳೊಳಗಾಗಿ ಲೆಕ್ಕಪರಿಶೋಧಕರಿಗೆ, ಲೆಕ್ಕಪರಿಶೋಧನಾ ಫರ್ಮಿಗೆ ಮತ್ತು ಸಹಕಾರಿ ಲೆಕ್ಕಪರಿಶೋಧನಾ ನಿರ್ದೇಶಕರಿಗೆ ತಿಳಿಸಬೇಕಾಗಿರುತ್ತದೆ. ಆದರೆ ಜಿಲ್ಲೆಯ ಬಹುಪಾಲು ಸಹಕಾರ ಸಂಘಗಳು ಮತ್ತು ಸೌಹಾರ್ದ ಸಹಕಾರಿಗಳು ಲೆಕ್ಕಪರಿಶೋಧಕರ, ಲೆಕ್ಕಪರಿಶೋಧನಾ ಫರ್ಮಿನ ನೇಮಕಾತಿ ಬಗ್ಗೆ ಈ ಕಚೇರಿಗೆ ಮಾಹಿತಿ ಸಲ್ಲಿಸಿರುವುದಿಲ್ಲ ಹಾಗೂ ಸಲ್ಲಿಸಿರುವ ಸುಮಾರು ಆಯ್ಕೆ ಪತ್ರಗಳಲ್ಲಿ ದಿನಾಂಕ ಹಾಗೂ ಲೆಕ್ಕಪರಿಶೋಧಕರ, ಸನ್ನದು ಲೆಕ್ಕಪರಿಶೋಧಕರ ಹೆಸರುಗಳು ತಿದ್ದುಪಡಿ ಆಗಿರುತ್ತವೆ. ಆದ್ದರಿಂದ 2024–25ನೇ ಸಾಲಿನ ಆಯ್ಕೆ ಪತ್ರಗಳನ್ನು ಸಲ್ಲಿಸುವಾಗ ವಾರ್ಷಿಕ ಮಹಾಸಭೆಯ ನಡುವಳಿಗಳ ಧೃಡೀಕೃತ ನಕಲು ಪ್ರತಿಯೊಂದಿಗೆ ಆಯ್ಕೆ ಪತ್ರವನ್ನು ವಾರ್ಷಿಕ ಮಹಾ ಸಭೆಯ ನಡಾವಳಿಯೊಂದಿಗೆ ಕಛೇರಿಯ ಇ–ಮೇಲ್ ಐಡಿಗೆ ಇ–ಮೇಲ್ ಮುಖಾಂತರ ಸಲ್ಲಿಸಲು, ಸಹಕಾರ ಸಂಘಗಳು ಲೆಕ್ಕಪರಿಶೋಧಕರನ್ನು, ಲೆಕ್ಕಪರಿಶೋಧನಾ ಫರ್ಮ್‌ನ್ನು ನೇಮಕಾತಿ ಮಾಡಿಕೊಂಡಿರುವ ಬಗ್ಗೆ ಮಾಹಿತಿಯನ್ನು ಮೂರು ದಿನಗಳೊಳಗಾಗಿ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಉಪ ನಿರ್ದೇಶಕರ ಕಚೇರಿ, ಸಪ್ತಗಿರಿ ನಿಲಯ, ಜೆ.ಸಿ.ಆರ್ ಬಡಾವಣೆ, 3ನೇ ಕ್ರಾಸ್, ಚಿತ್ರದರ್ಗ–577501 ದೂರವಾಣಿ ಸಂಖ್ಯೆ 08194–200105,ಇ–ಮೇಲ್– ddca-chitradurg-ka@nic.in ಕಚೇರಿಗೆ ಸಲ್ಲಿಸುವುದು. ಇಲ್ಲವಾದಲ್ಲಿ ಈ ಸಂಘಗಳಿಗೆ ಇಲಾಖೆಯಿಂದ ಲೆಕ್ಕಪರಿಶೋಧಕರನ್ನು ನೇಮಿಸಲಾಗುವುದೆಂದು ಹಾಗೂ ಲೆಕ್ಕಪರಿಶೋಧನೆಯಲ್ಲಿ ವಿಳಂಬವಾದಲ್ಲಿ ಸಂಬಂಧಿಸಿದ ಸಂಘಗಳ, ಸಹಕಾರಿಗಳ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳೇ ಹೊಣೆಗಾರರೆಂದು ತಿಳಿಯುವುದು ಎಂದು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಫೆ.07 ಮತ್ತು 08ರಂದು ರಾಜ್ಯಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ

» ಚಿತ್ರದುರ್ಗ

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಇದೇ ಫೆ.07 ಮತ್ತು 08ರಂದು ಬೆಳಿಗ್ಗೆ 10ಕ್ಕೆ ಚಿತ್ರದುರ್ಗ ನಗರದ ಮುರುಘರಾಜೇಂದ್ರ ಬೃಹನ್ಮಠದ ಅನುಭವನ ಮಂಟಪದಲ್ಲಿ "ರಾಜ್ಯಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ" ಹಮ್ಮಿಕೊಳ್ಳಲಾಗಿದೆ. ಮುರುಘಾಮಠದ ಆಡಳಿತ ಮಂಡಳಿ ಸದಸ್ಯ ಡಾ.ಬಸವಕುಮಾರ ಸ್ವಾಮೀಜಿ ದಿವ್ಯಸಾನ್ನಿಧ್ಯವಹಿಸುವರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟಿಸುವರು. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಸ್ಪರ್ಧೆಗಳ ಉದ್ಘಾಟನೆ ನೆರವೇರಿಸುವರು. ಸಂಸದ ಗೋವಿಂದ ಎಂ ಕಾರಜೋಳ ಘನ ಉಪಸ್ಥಿತಿವಹಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್.ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ರಾಘವೇಂದ್ರ ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಆಮ್ಲಾನ್ ಆದಿತ್ಯ ಬಿಸ್ವಾಸ್ ಭಾಗವಹಿಸುವರು.

# ಮೈಕ್ರೋ ಫೈನಾನ್ಸ್ ದಬ್ಬಾಳಿಕೆಗೆ ಕ್ರಮ

### ಅನಗತ್ಯ ಕಿರುಕುಳ ತಪ್ಪಿಸಲು ನಿಯಮಗಳ ಪಾಲನೆಗೆ ಸೂಚನೆ –ಕಿರುಕುಳ ನೀಡಿದರೆ ಸಹಾಯವಾಣಿಗೆ ಮಾಹಿತಿ ನೀಡಿ

» ಚಿತ್ರದುರ್ಗ

ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದವರು ತಮ್ಮ ಅವಶ್ಯಕತೆಗಳಿಗಾಗಿ ಸಣ್ಣ ಫೈನಾನ್ಸ್ ಕಂಪನಿಗಳಲ್ಲಿ ಸಾಲ ಪಡೆದು,ಮರುಪಾವತಿಸುವಲ್ಲಿ ವಿಳಂಬ ಮಾಡಿದ ಸಾಲಗಾರರ ಮೇಲೆ ಅನಧಿಕೃತ ಲೇವಾದೇವಿದಾರರು,ಹಣಕಾಸು ಸಂಸ್ಥೆಗಳಿಂದ ಆಗುತ್ತಿರುವ ದಬ್ಬಾಳಿಕೆ,ದೌರ್ಜನ್ಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ದೌರ್ಜನ್ಯ ತಡೆಗೆ ಹಲವು ಕ್ರಮಗಳನ್ನು ತೆಗೆದುಕೊಂಡಿದೆ.

ತುರ್ತು ವೈದ್ಯಕೀಯ ಚಿಕಿತ್ಸೆ, ಮಕ್ಕಳ ವಿದ್ಯಾಭ್ಯಾಸ, ಮದುವೆ ಇನ್ನಿತರ ಖರ್ಚಿಗಾಗಿ ತುರ್ತಾಗಿ ಕೈ ಸಾಲ ಪಡೆಯುವ ಪದ್ಧತಿ ರೂಢಿಯಲ್ಲಿದೆ.ಬಹುತೇಕರು ಪಡೆದ ಸಾಲವನ್ನು ವಾಪಸ್ಸು ನೀಡುತ್ತಾರೆ. ಆದರೆ ಕೆಲವು ವ್ಯಕ್ತಿಗಳು ಸಾಮಾಜಿಕ,ವೈಯಕ್ತಿಕ ಅಥವಾ ಉತ್ಪಾದಕವಲ್ಲದ ಕಾರ್ಯಗಳಿಗಾಗಿ ಹಣ ಖರ್ಚು ಮಾಡುವುದರಿಂದ, ಮರುಪಾವತಿ ಕ್ಷಮತೆ ಕಡಿಮೆ ಇರುತ್ತದೆ. ಇಂತಹ ಸಂದರ್ಭಗಳಲ್ಲಿ ಸಾಲ ನೀಡಿದವರು ಮರು ವಸೂಲಿಗಾಗಿ ಒತ್ತಾಯಿಸುತ್ತಾರೆ.ಕೆಲವೆಡೆ ಇದು ಕಿರುಕುಳವಾಗಿ ಬೆಳೆಯುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ.

ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ: ಕಳೆದ ಜನವರಿ 25 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕರ್ನಾಟಕ ವಲಯದ ಅಧ್ಯಕ್ಷರು, ಭಾರತೀಯ ರಿಸರ್ವ್ ಬ್ಯಾಂಕ್ (RBI) ನ ಪ್ರಾಂತೀಯ ನಿರ್ದೇಶಕರು, ಹಾಗೂ ಸಾ–ಧನ್ (SA-DHAN), ಎಕೆಎಂಐ,ಎಂಎಫ್‌ಐಎನ್ ಮತ್ತು ಪ್ರಮುಖ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು, ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿ ಸಂಚಾಲಕರು, ಅಧಿಕಾರಿಗಳು , ಪೊಲೀಸ್, ಕಂದಾಯ, ಸಹಕಾರ ಹಾಗೂ ಆರ್ಥಿಕ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಭೆ ನಡೆಸಿ. ಕಿರುಕುಳವನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಿರ್ದೇಶನ ನೀಡಿದ್ದಾರೆ.

ಕರ್ನಾಟಕದ ಅಧಿನಿಯಮಗಳು: ಕರ್ನಾಟಕ ಲೇವಾದೇವಿದಾರರ ಅಧಿನಿಯಮ–1961 ಅಡಿಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ. ಈ ಅಧಿನಿಯಮದಡಿಯಲ್ಲಿ 2024ರ ಡಿಸೆಂಬರ್ 31 ರವರೆಗೆ 20,425 ಸಂಸ್ಥೆಗಳು ನೋಂದಣಿಯಾಗಿವೆ. ಅದರಲ್ಲಿ 6590 ಲೇವಾದೇವಿದಾರರು, 6772 ಪಾನ್ ಬ್ರೋಕರ್‌ಗಳು, 7063 ಹಣಕಾಸಿನ ಸಂಸ್ಥೆಗಳು (Finance Corporation) ಇವೆ. ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಕಾಯಿದೆ– 2004 ಪ್ರಕಾರ ಭದ್ರತಾ ಸಾಲಗಳಿಗೆ ವರ್ಷಕ್ಕೆ ಶೇ.14 ಹಾಗೂ ಭದ್ರತೆ ಇಲ್ಲದ ಸಾಲಗಳಿಗೆ ವರ್ಷಕ್ಕೆ ಗರಿಷ್ಠ ಶೇ.16 ಗರಿಷ್ಠಬಡ್ಡಿದರವನ್ನು ಲೇವಾದೇವಿದಾರರಿಗೆ ನಿಗದಿಪಡಿಸಲಾಗಿದೆ.

ಇಂತಹ ಮಾಹಿತಿಗಳನ್ನು ಸಾರ್ವಜನಿಕವಾಗಿ ಫಲಕಗಳ ಮೂಲಕ ಪ್ರದರ್ಶಿದಲು ಸಂಸ್ಥೆಗಳು ಹಾಗೂ ಸಂಬಂಧಿಸಿದ ಕಚೇರಿಗಳಿಗೆ ತಿಳಿಸಲಾಗಿದೆ. ಸಾಲಗಾರರು ಇವುಗಳನ್ನು ಸೂಕ್ಷ್ಮವಾಗಿ ಗಮನಿಸಿ ಸಾಲ ಪಡೆಯುವ ಮುನ್ನ ಲೇವಾದೇವಿಸಂಸ್ಥೆಗಳಅಧಿಕೃತನೋಂದಣಿ ಪತ್ರ, ಬಡ್ಡಿದರ, ವಸೂಲಿ ಪ್ರಕ್ರಿಯೆ ಇತ್ಯಾದಿಗಳ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಈ ಪ್ರಕ್ರಿಯೆಗಳಿಂದ ಸಾಲ ಮರುಪಾವತಿ ಸಂದರ್ಭದಲ್ಲಿನ ಕಿರುಕುಳ ತಪ್ಪಿಸಲು ಸಾಧ್ಯವಾಗುತ್ತದೆ.

ಸೂಕ್ಷ್ಮ ಹಣಕಾಸು (Micro finance) ಸಂಸ್ಥೆಗಳು ಎಂದರೇನು?: 3 ಲಕ್ಷ ರೂ.ವರೆಗೂ ಆದಾಯವಿರುವ ಸಾರ್ವಜನಿಕರಿಗೆ ಸಾಲವನ್ನು ಒದಗಿಸುವ ವ್ಯವಸ್ಥೆಯನ್ನು ಮೈಕ್ರೋ ಫೈನಾನ್ಸ್ ಎಂದು ಘೋಷಿಸಲಾಗಿದೆ. ಬ್ಯಾಂಕುಗಳಲ್ಲದ ಸಹಕಾರ ಸಂಘಗಳು, ಎನ್‌ಬಿಎಫ್‌ಸಿಗಳು, ಸರ್ಕಾರೇತರ ಸಂಸ್ಥೆಗಳು, ಟ್ರಸ್ಟ್‌ಗಳು, ಸಣ್ಣ ಅಂಗಡಿ ಮಾಲೀಕರು, ಇನ್ನಿತರರು ಸಾಲ ನೀಡುತ್ತಾರೆ.

ಸಹಕಾರಿಸಂಸ್ಥೆಗಳಮೇಲ್ವಿಚಾರಣೆಯನ್ನು ಸಹಕಾರ ಇಲಾಖೆ. ಬ್ಯಾಂಕ್ ಅಲ್ಲದ ಆರ್ಥಿಕ ಸಂಸ್ಥೆಗಳ (ಎನ್‌ಬಿಎಫ್‌ಸಿ) ಮೇಲ್ವಿಚಾರಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಮೂಲಕ ನೋಂದಣಿ ಮತ್ತು ಮೇಲ್ವಿಚಾರಣೆ ಮಾಡಲಾಗುತ್ತಿದೆ. ಸಾ–ಧನ್ (SA-Dhan) ಮತ್ತು ಮೈಕ್ರೋ ಫೈನಾನ್ಸ್ ಇಂಡಸ್ಟ್ರಿ ನೆಟ್‌ವರ್ಕ್ (MFIN) ಸಂಸ್ಥೆಗಳನ್ನು ಭಾರತೀಯ ರಿಸರ್ವ್ ಬ್ಯಾಂಕ್ (RBI) ಸ್ವಯಂ ನಿಯಂತ್ರಣಾ ಸಂಸ್ಥೆಗಳನ್ನಾಗಿ (self-regulatory organisation) ನೇಮಿಸಿದೆ.ನಿಗದಿತ ಉತ್ತಮ ಲೇವಾದೇವಿ ಪದ್ಧತಿಗಳನ್ನು ಅನುಷ್ಠಾನಗೊಳಿಸಲು ಈ ಸಂಸ್ಥೆಗಳನ್ನು ರಚಿಸಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಕೇವಲ 31 ಮೈಕ್ರೋ ಫೈನಾನ್ಸ್ ಇಂಡಸ್ಟ್ರಿಗಳು ಅಸ್ತಿತ್ವದಲ್ಲಿ ಇವೆ. ಈ 31 ಸಂಸ್ಥೆಗಳು ಅಸೋಸಿಯೇಷನ್ ಆಫ್ ಕರ್ನಾಟಕ ಮೈಕ್ರೋ ಫೈನಾನ್ಸ್ ಇನಸ್ಟಿಟ್ಯೂಷನ್ (AKMI) ಸದಸ್ಯತ್ವ ಪಡೆದಿವೆ. ರಾಜ್ಯದಲ್ಲಿ ಈ ಸಂಸ್ಥೆಗಳ 3090 ಶಾಖೆಗಳಿದ್ದು 37,967 ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ. 1,09,88,332 ಖಾತೆಗಳಲ್ಲಿ 59,367.76 ಕೋಟಿ ರೂ. ಬಾಕಿ ಉಳಿದಿದೆ.

ನಿಯಮಗಳನ್ನು ಪಾಲಿಸದ ಹಣಕಾಸು ಸಂಸ್ಥೆಗಳ ಬಗ್ಗೆ ಮೇಲ್ವಿಚಾರಣಾ ಸಂಸ್ಥೆಗಳ ಮೂಲಕ ಭಾರತೀಯ ರಿಸರ್ವ್ ಬ್ಯಾಂಕಿಗೆ ವರದಿ ನೀಡಲಾಗುತ್ತದೆ , ಆರ್‌ಬಿಐ ಒಪ್ಪಿಗೆಯೊಂದಿಗೆ ಸೂಕ್ತ ಶಿಸ್ತಿನ ಕ್ರಮವನ್ನು ಜರುಗಿಸಲಾಗುತ್ತದೆ. ದಬ್ಬಾಳಿಕೆಯ ಸಾಲ ಮರುಪಾವತಿ ಕ್ರಮದಿಂದ ಸಂರಕ್ಷಿಸಲು ಅಧಿಕೃತವಾಗಿ ಭಾರತೀಯ ರಿಸರ್ವ್ ಬ್ಯಾಂಕ್ ಮಾರ್ಗಸೂಚಿಗಳು: ಎಲ್ಲಾ ಎನ್‌ಬಿಎಫ್‌ಸಿ–ಎಂಎಫ್‌ಐಗಳು ಬಡ್ಡಿಯ ದರ, ಮರುಪಾವತಿಯ ಕಂತು ಮತ್ತು ಅಸಲು ಸಾಲ ಮುಂತಾದವುಗಳ ಬಗ್ಗೆ ಫ್ಯಾಕ್ಟ್ ಶೀಟ್‌ನಲ್ಲಿ ಸಾಲ ವಿತರಣೆಯ ಸಮಯದಲ್ಲಿ ಪ್ರತಿಯೊಬ್ಬ ಸಾಲಗಾರನಿಗೆ ಮಾಹಿತಿ ಒದಗಿಸಬೇಕು.

**ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಅನುಸರಿಸಬೇಕಾದ ಕ್ರಮಗಳು:** ಮೈಕ್ರೋ ಫೈನಾನ್ಸ್ ಇನ್‌ಸ್ಟಿಟ್ಯೂಷನ್ (ಎಂಎಫ್‌ಐ), ಮನಿ ಲೆಂಡಿಂಗ್ ಏಜೆನ್ಸಿ ಅಥವಾ ಸಂಸ್ಥೆಯಿಂದ ನೀಡುವ ಎಲ್ಲಾ ಸಾಲಗಳ ಮಂಜೂರಾತಿ, ವಿತರಣೆಯ ಪ್ರಕ್ರಿಯೆಯಲ್ಲಿ ಈ ಅಂಶಗಳನ್ನು ಅನುಸರಿಸಬೇಕು:

ಸಾಲಗಾರನಿಗೆ ಸಾಲದ ನಿಯಮಗಳ ಬಗ್ಗೆ ಸ್ಥಳೀಯ ಭಾಷೆಯಲ್ಲಿ ಅಥವಾ ಆತನಿಗೆ ಅರ್ಥವಾಗುವ ಭಾಷೆಯಲ್ಲಿ ತಿಳಿಸಬೇಕು. ಸಾಲದ ಅರ್ಜಿಯಲ್ಲಿ ಷರತ್ತುಗಳ ಬಗ್ಗೆ ಮಾಹಿತಿ ನೀಡಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲು ಸಹಾಯ ಮಾಡಬೇಕು. ಯಾವ ದಾಖಲೆಗಳನ್ನು ನೀಡುವ ಅವಶ್ಯಕತೆ ಇದೆ ಎನ್ನುವ ಸೂಕ್ತ ಮಾಹಿತಿ ನೀಡಬೇಕು. ನಗದು ಪುಸ್ತಕ, ಲೆಡ್ಜರ್ ಮತ್ತು ಇತರ ದಾಖಲೆಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು.

ಸಾಲ ನೀಡಿದ ದಿನಾಂಕದಿಂದ ಏಳು ದಿನಗಳ ಒಳಗೆ ಸಾಲಗಾರನಿಗೆ ನಿಗದಿತ ನಮೂನೆಯಲ್ಲಿ ಸಾಲದ ಮೊತ್ತ ,ನೀಡಿದ ದಿನಾಂಕ ಮತ್ತು ಅವಧಿಯ ಮುಕ್ತಾಯ, ಸಂಸ್ಥೆಯ ಕಾರ್ಯನಿರ್ವಾಹಕರ ಹೆಸರು ಮತ್ತು ವಿಳಾಸ, ನಿಯಮಾನುಸಾರ ವಿಧಿಸಲಾಗುವ ಬಡ್ಡಿದರ ಸ್ಪಷ್ಟವಾಗಿರುವ ಲಿಖಿತ ದಾಖಲೆಯನ್ನು ತಲುಪಿಸಬೇಕು.

ಸಾಲಗಾರನು ಮಾಡುವ ಪಾವತಿಗೆ ಪ್ರತಿಯಾಗಿ ಸಹಿ ಮಾಡಿದ ರಶೀದಿ ನೀಡಬೇಕು. ಸಾಲಗಾರನ ಲಿಖಿತ ಬೇಡಿಕೆಯ ಮೇರೆಗೆ ಸಾಲಕ್ಕೆ ಸಂಬಂಧಿಸಿದ ಯಾವುದೇ ದಾಖಲೆಯ ನಕಲನ್ನು ನೀಡಬೇಕು. ಸಾಲಗಾರರಿಂದ ಪಡೆದ ಭದ್ರತೆಯನ್ನು ಸ್ಪಷ್ಟವಾಗಿ ತಿಳಿಸಬೇಕು. ಜನಸಾಮಾನ್ಯರು ಈ ವಿಧಾನಗಳ ಬಗ್ಗೆ ತಿಳುವಳಿಕೆ ಹೊಂದಿರಬೇಕು. ತಮ್ಮ ಅಧಿಕೃತ ಹಕ್ಕುಗಳು,ಬಾಧ್ಯತೆಗಳ ಬಗ್ಗೆ ಖಚಿತ ಪಡಿಸಿಕೊಂಡ ನಂತರ ಸಾಲ ತೆಗೆದುಕೊಳ್ಳಬೇಕು.ಸ್ವಸಹಾಯ ಗುಂಪುಗಳಲ್ಲಿ ಸಾಲ: ಮಹಿಳಾ ಸ್ವ–ಸಹಾಯ ಗುಂಪುಗಳಿಂದ ಹಲವು ಕಡೆ ಬಳಕೆ ಸಾಲವನ್ನು (Consumption Loan) ಪಡೆಯುವ ವ್ಯವಸ್ಥೆ ಇದೆ. ಇವುಗಳಲ್ಲಿ ಶೇ. 99 ರಷ್ಟು ಯಶಸ್ವಿಯಾಗಿ ಮರುಪಾವತಿ ಕೂಡ ಆಗುತ್ತವೆ. ಬ್ಯಾಂಕುಗಳಲ್ಲಿ ಇರುವಂತೆ ದಾಖಲಾತಿ ಒದಗಿಸುವ, ಜಾಮೀನು ನೀಡುವ ಹಾಗೂ ತಮ್ಮ ಆಸ್ತಿಗಳ ಅಡಮಾನ ಮಾಡುವ ಕ್ಲಿಷ್ಟ ವಿಧಾನ ಇಲ್ಲಿರುವುದಿಲ್ಲ. ಸರಳ ವಿಧಾನ ಅನುಸರಿಸಿ ಸಾಲ ಸಿಗುವುದರಿಂದ ಜನರು ಇಂತಹ ವ್ಯವಸ್ಥೆಗಳಿಗೆ ಹೆಚ್ಚಾಗಿ ಮೊರೆ ಹೋಗುತ್ತಾರೆ.



ರಾಜ್ಯ ಸರ್ಕಾರವು ಮೈಕ್ರೋ ಫೈನಾನ್ಸ್ ಸಾಲಗಾರರಿಗೆ ಎಲ್ಲ ರೀತಿಯ ಕಾನೂನು ರಕ್ಷಣೆ ನೀಡಲು ಕ್ರಮವಹಿಸಿದೆ ನೊಂದ ವ್ಯಕ್ತಿಗಳು ರಾಜ್ಯದ ಏಕೀಕೃತ ಸಹಾಯವಾಣಿ ಸಂಖ್ಯೆ: 112 ಅಥವಾ 1902 ಗೆ ಸಂಪರ್ಕಿಸಬಹುದು.

▪ ಡಾ.ಶಾಲಿನಿ ರಜನೀಶ್, ಮುಖ್ಯ ಕಾರ್ಯದರ್ಶಿ

### ಸಹಾಯವಾಣಿ

ಬಡಜನರ ಅವಶ್ಯಕತೆಯನ್ನು ಬಂಡವಾಳ ಮಾಡಿಕೊಳ್ಳುವ ಕೆಲವು ವ್ಯಕ್ತಿಗಳು,ಅನಧಿಕೃತ ಲೇವಾದೇವಿದಾರರು ಜನರ ತುರ್ತು ಅವಶ್ಯಕತೆಗೆ ಹಣ ನೀಡಿ, ಹೆಚ್ಚು ಬಡ್ಡಿ ವಿಧಿಸಿ ಶೋಷಣೆ ಮಾಡುತ್ತಾರೆ. ಅಂತಹ ವ್ಯಕ್ತಿಗಳು ಅಥವಾ ಸಂಸ್ಥೆಗಳ ವಿರುದ್ಧ ಸಾರ್ವಜನಿಕರು ಸಹಾಯವಾಣಿ ಸಂಖ್ಯೆಗಳಿಗೆ ದೂರು ನೀಡಬಹುದು. ಸೂಕ್ಷ್ಮ ಹಣಕಾಸು ಸಂಸ್ಥೆ (MFI), ಮನಿ ಲೆಂಡಿಂಗ್ ಸಂಸ್ಥೆಗಳ ನಿಯಮ ಉಲ್ಲಂಘನೆಗಳ ಕುರಿತು ಭಾರತೀಯ ರಿಸರ್ವ್ ಬ್ಯಾಂಕ್ (RBI) ಸಹಾಯವಾಣಿ ಸಂಖ್ಯೆ 14448 ಗೆ ಮಾಹಿತಿ ನೀಡಬಹುದು. ರಾಜ್ಯ ಸರ್ಕಾರವು ಮೈಕ್ರೋ ಫೈನಾನ್ಸ್ ಸಾಲಗಾರರಿಗೆ ಎಲ್ಲ ರೀತಿಯ ಕಾನೂನು ರಕ್ಷಣೆ ನೀಡಲು ಕ್ರಮವಹಿಸಿದೆ ನೊಂದ ವ್ಯಕ್ತಿಗಳು ರಾಜ್ಯದ ಏಕೀಕೃತ ಸಹಾಯವಾಣಿ ಸಂಖ್ಯೆ: 112 ಅಥವಾ 1902 ಸಂಪರ್ಕಿಸಬಹುದು.

# ಕ್ಷಯ ರೋಗ ಮುಕ್ತ ಹೊಸದುರ್ಗ ತಾಲೂಕಿಗೆ ಕರೆ

**ಹೊಸದುರ್ಗ:** ಮಾನವ ತನ್ನ ದೈನಂದಿನ ಬದುಕಿನ ಒತ್ತಡದಲ್ಲಿ ತನ್ನ ಆರೋಗ್ಯವನ್ನು ಕಾಪಾಡಿಕೊಳ್ಳುವುದನ್ನು ಮರೆತಿದ್ದಾನೆ. ಕೇವಲ ಕೆಮ್ಮು ನೆಗಡಿ ಎಂದು ಉದಾಸೀನ ಮಾಡಿ ಚಿಕಿತ್ಸೆ ಪಡೆದುಕೊಳ್ಳದೆ ಮುಂದೊಂದು ದಿನ ಅದು ಕ್ಷಯ ರೋಗವಾಗಿ ಮಾರ್ಪಟ್ಟು ಆರೋಗ್ಯವನ್ನು ಕಳೆದುಕೊಳ್ಳುವ ಬದಲು ಬೇಗನೇ ಚಿಕಿತ್ಸೆಯನ್ನು ಪಡೆದುಕೊಳ್ಳುವುದರಿಂದ ಕ್ಷಯ ರೋಗವನ್ನು ಗುಣಪಡಿಸಿಕೊಳ್ಳಬಹುದು ಎಂದು ಪುರಸಭಾ ಸದಸ್ಯೆ ಡಾಕ್ಟರ್ ಸ್ವಾತಿ ಪ್ರದೀಪ್ ತಿಳಿಸಿದರು. ನಗರದ ತಾಲ್ಲೋಕು ಅರೋಗ್ಯ ಅಧಿಕಾರಿಗಳ ಸಭಾಂಗಣ ದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಸದ್ಗುರು ಆಯುರ್ವೇದ ಸಂಸ್ಥೆಯಿಂದ ಕ್ಷಯರೋಗಿಗಳಿಗೆ ನಿಕ್ಷಯ್ ಮಿತ್ರ ಕಾರ್ಯಕ್ರಮದಡಿಯಲ್ಲಿ ಫುಡ್ ಕಿಟ್ ವಿತರಣೆ ಮಾಡಿ ಮಾತನಾಡಿದ ಅವರು ಇತ್ತೀಚಿನ ದಿನಗಳಲ್ಲಿ ಸಾವಯವ ಕೃಷಿಯಿಂದ ಬೆಳೆದ ಆಹಾರ ಮರೀಚಿಕೆಯಾಗಿದೆ. ರಾಸಾಯನಿಕ ಮುಕ್ತ ಆರೋಗ್ಯಕರವಾದಂತಹ ಸಾವಯವ ಆಹಾರ ಬಳಸಿ ಆರೋಗ್ಯವನ್ನು ಕಾಪಾಡಿಕೊಂಡು ನೆಮ್ಮದಿಯ ಜೀವನ ಕಂಡುಕೊಳ್ಳಬೇಕು ಇದರಿಂದ ಕುಟುಂಬ ನೆಮ್ಮದಿಯಿಂದ ಇರಲು ಸಾಧ್ಯವಾಗುತ್ತದೆ.




ಪ್ರಮುಖ ಸುದ್ದಿ

### ಜಗಜೀವನರಾಂ, ಕನಕ, ಯಾದವ, ಸೇವಾಲಾಲ್ ಭವನಗಳ ಅಪೂರ್ಣಗೊಂಡ ಕಾಮಗಾರಿ ಮುಂದುವರಿಕೆ

# ಅಭಿವೃದ್ಧಿಪರ ಚಿಂತನೆಗಳಿಗೆ ಜನರ ನಿರಂತರ ಸಹಕಾರ ಸಂತಸ ತಂದಿದೆ

» ಚಳ್ಳಕೆರೆ

ಕಳೆದ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅನುದಾನ ಕೊರತೆಯಿಂದ ಅಪೂರ್ಣಗೊಂಡ ಕಾಮಗಾರಿಗಳನ್ನು ಸರ್ಕಾರದಿಂದ ವಿಶೇಷ ಅನುದಾನ ತಂದು ಅವುಗಳನ್ನು ಪೂರ್ಣಗೊಳಿಸುವ ಕಾರ್ಯ ನಡೆಯುತ್ತಿದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕು ಕಚೇರಿ ಆವರಣದಲ್ಲಿ ಕಾಮಗಾರಿ ವೀಕ್ಷಣೆ ಸಂದರ್ಭದಲ್ಲಿ ಪತ್ರಿಕೆಯೊಂದಿಗೆ ಮಾತನಾಡಿ, ನಗರದ ಚಿತ್ರದುರ್ಗ ರಸ್ತೆಯ ಜಗಜೀವನರಾಂಭವನ, ಕನಕಭವನ, ಸೇವಾಲಾಲ್‌ಭವನ, ಯಾದವಭವನ ಸೇರಿದಂತೆ ವಿವಿಧೆಡೆ ಅನೇಕ ಕಾಮಗಾರಿಗಳು ಅನುದಾನ ಕೊರತೆಯಿಂದ ಕಾಮಗಾರಿಗಳನ್ನು ತಡೆಯಲಾಗಿತ್ತು. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮಾಹಿತಿ ನೀಡಿ ಅನುದಾನವನ್ನು ಮಂಜೂರು ಮಾಡಿಸಿ ಕಾಮಗಾರಿ ನಡೆಸಲಾಗುತ್ತಿದೆ. ಯಾವುದೇ ಕಾಮಗಾರಿ ಪೂರ್ಣಗೊಳ್ಳದೆ ಇದ್ದರೆ ಅದರಿಂದ ಹೆಚ್ಚು ನಷ್ಟ ಸಾರ್ವಜನಿಕರಿಗೆ ಆಗುತ್ತದೆ. ಆದ್ದರಿಂದ ಸರ್ಕಾರ ಮೇಲೆ ಒತ್ತಡ ತಂದು ಅಪೂರ್ಣಗೊಂಡ ಕಾಮಗಾರಿಗಳನ್ನು ಪೂರ್ಣಗೊಳಿಸಲು ಪ್ರಾಮಾಣಿಕ ಪ್ರಯತ್ನ ನಡೆಸಲಾಗುತ್ತಿದೆ. ಕ್ಷೇತ್ರದ ಸಮಸ್ತ ಜನತೆ ಅಭಿವೃದ್ಧಿಪರ ಚಿಂತನೆಗಳಿಗೆ ನಿರಂತರ ಸಹಕಾರ ನೀಡುತ್ತಿರುವುದು ಸಂತಸ ತಂದಿದೆ ಎಂದರು. ತಾಲ್ಲೂಕು ಮಟ್ಟದಲ್ಲಿ ನಡೆದ ಅನೇಕ ಸಭೆಯಲ್ಲಿ ಅಪೂರ್ಣಗೊಂಡ ಕಾಮಗಾರಿ ಬಗ್ಗೆ ಚರ್ಚೆ ನಡೆಸಿ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಲಾಗುತ್ತಿತ್ತು. ಆದರೆ, ನಿರೀಕ್ಷಿತ ಮಟ್ಟದಲ್ಲಿ ಅನುದಾನ ಸಕಾಲದಲ್ಲಿ ಲಭ್ಯವಾಗಲಿಲ್ಲ. ನಗರದ ಖಾಸಗಿ ಬಸ್ಟಾಂಡ್ ಕಾಮಗಾರಿಯನ್ನೂ ಸಹ ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದರು. ಈ ವೇಳೆ ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮಭರಮಣ್ಣ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯ ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಶಿರಸ್ತೇದಾರ್ ಸದಾಶಿವಪ್ಪ, ಕಂದಾಯಾಧಿಕಾರಿ ಆರ್.ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.





**ಫಾಸ್ಟ್ ನ್ಯೂಸ್**

## ನೂತನ ಶಾಲಾ ಕಟ್ಟಡ ಉದ್ಘಾಟನಾ ಕಾರ್ಯಕ್ರಮ

» **ದಾವಣಗೆರೆ**

ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ಹಾಗೂ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಹುಚ್ಚಂಗಿಪುರ, ಜಗಳೂರು ತಾಲ್ಲೂಕು, ಎನ್. ರವಿಕುಮಾರ್ ಶಾಸಕರು ವಿಧಾನ ಪರಿಷತ್, ಸಂಸದರುಗಳ ಹಾಗೂ ಶಾಸಕರುಗಳ ಇವರ ಪ್ರದೇಶಾಭಿವೃದ್ಧಿ ನಿಧಿಯಿಂದ ನಿರ್ಮಿಸಲಾದ ನೂತನ ಶಾಲಾ ಕಟ್ಟಡದ ಲೋಕಾರ್ಪಣಾ ಕಾರ್ಯಕ್ರಮ ಫೆಬ್ರವರಿ 7 ರಂದು ಮಧ್ಯಾಹ್ನ 12.30ಕ್ಕೆ ಜಗಳೂರು ತಾಲ್ಲೂಕು ಹುಚ್ಚಂಗಿಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣ ಆಯೋಜಿಸಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್. ಎಸ್ ಮಲ್ಲಿಕಾರ್ಜುನ್ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಉದ್ಘಾಟಿಸುವರು. ಜಗಳೂರು ಕ್ಷೇತ್ರದ ಶಾಸಕರಾದ ಬಿ.ದೇವೇಂದ್ರಪ್ಪ ಅಧ್ಯಕ್ಷತೆ ವಹಿಸುವರು. ಕೇಂದ್ರ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್, ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಘನ ಉಪಸ್ಥಿತರಿರುವರು. ಮುಖ್ಯ ಅತಿಥಿಗಳಾಗಿ ರಾಜ್ಯಸಭಾ ಸಂಸದರಾದ ಲೆಹರ್ ಸಿಂಗ್ ಸಿರೋಯಾ, ಕೆ.ನಾರಾಯಣ, ವೀರಣ್ಣ ಕಡಾಡಿ, ವಿಧಾನ ಪರಿಷತ್ ಶಾಸಕರಾದ ಎನ್.ರವಿಕುಮಾರ್, ಡಾ.ಎಂ.ಜಿ ಮೂಳೆ, ಡಿ.ಟಿ.ಶ್ರೀನಿವಾಸ್, ಚಿದಾನಂದ ಎಂ ಗೌಡ, ಕೆ.ಎಸ್ ನವೀನ್, ಮಾಜಿ ರಾಜ್ಯಸಭಾ ಸದಸ್ಯರಾದ ಕೆ.ಸಿ ರಾಮಮೂರ್ತಿ, ದಿದ್ದಿಗಿ ಗ್ರಾ.ಪಂ ಅಧ್ಯಕ್ಷರಾದ ಗುತ್ಯಮ್ಮ ಸಿದ್ದಪ್ಪ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಪಿ.ಟಿ.ರಮೇಶ್ ಭಾಗವಹಿಸುವರು. ದಾನಿಗಳು: ಸ್ಪೇಸ್ ಮ್ಯಾನೇಜ್‌ಮೆಂಟ್ ಸಲ್ಯೂಷನ್ ಲಿಮಿಟೆಡ್‌ನ ಡಾ.ದಿನೇಶ್, ವೋಲ್ವೋ ಗ್ರೂಪ್ ಜಿ.ವಿ.ರಾವ್ ಪಾಲ್ಗೊಳುವರು.

## ವಿಕಲಚೇತನರ ಬದುಕಿಗೆ ಆಸರೆಯಾದ ಧರ್ಮಸ್ಥಳ ಸಂಸ್ಥೆ



» **ಹೊಸದುರ್ಗ**

ಮನುಷ್ಯನಾಗಿ ಹುಟ್ಟಿದ ಮೇಲೆ ಹಲವಾರು ಸಮಸ್ಯೆಗಳನ್ನು ಹೊತ್ತು ಮಾನವ ಈ ಭೂಮಿಗೆ ಬರುತ್ತಾನೆ. ವಿಕಲಚೇತನೊಂದಿಗೆ ಧರ್ಮಸ್ಥಳದ ಪೂಜ್ಯ ವೀರೇಂದ್ರ ಹೆಗ್ಗಡೆಯವರು ವೀಲ್ ಚೇರ್ ನೀಡುವ ಮೂಲಕ ವಿಕಲಚೇತನರ ಸ್ವಾವಲಂಬಿ ಬದುಕಿಗೆ ಆಸರೆಯಾಗಿದ್ದಾರೆ ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಹಾಲು ರಾಮೇಶ್ವರ ಯೋಜನಾ ಕಚೇರಿಯ ಯೋಜನಾಧಿಕಾರಿ ಚಂದ್ರಶೇಖರ್ ತಿಳಿಸಿದರು ತಾಲೂಕಿನ ಮಾಡದಕೆರೆ ವಲಯದ ಕೆಂಕೆರೆ ಗ್ರಾಮದಲ್ಲಿ ವೀಲ್ ಚೇರ್ ವಿತರಣೆ ಮಾಡಿ ಮಾತನಾಡಿದ ಅವರು ಶಾಂತಮ್ಮ ಎಂಬುವ ಸದಸ್ಯರು ಕಳೆದ ಎರಡು ವರ್ಷದಿಂದ ಅಂಗವಿಕಲತೆಯಿಂದ ಬಳಲುತ್ತಿದ್ದು ಇದನ್ನು ಗಮನಿಸಿದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಶಾಂತಮ್ಮ ಅವರಿಗೆ ವೀಲ್ ಚೇರನ್ನು ನೀಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಇಡೀ ರಾಜ್ಯದಲ್ಲಿ ಇಂತಹ ಅಂಗವಿಕಲರಿಗೆ,ವಿಕಲಚೇತನರಿಗೆ. ಹಲವು ಸಾಮಗ್ರಿಗಳನ್ನು ಪ್ರತಿನಿತ್ಯವೂ ರಾಜ್ಯದ ಮೂಲೆ ಮೂಲೆಯಲ್ಲಿ ನೀಡುತ್ತಿದೆ. ಅದರೊಟ್ಟಿಗೆ ಹೊಸದುರ್ಗ ತಾಲೂಕಿನಲ್ಲಿ 263 ಜನ ನಿರ್ಗತಿಕರಿಗೆ ಪ್ರತಿ ತಿಂಗಳು ಒಂದು ಸಾವಿರ ರೂಪಾಯಿ ಮಾಶಾಸನ ನೀಡುತ್ತಿರುವುದನ್ನು ತಿಳಿಸಿದರು. ಇಂತಹ ಪುಣ್ಯದ ಕಾರ್ಯವನ್ನು ಇಡೀ ರಾಜ್ಯದಂತ ಮಾಡುತ್ತಿರುವ ಶ್ರೀ ಕ್ಷೇತ್ರ ಧರ್ಮಸ್ಥಳದ ಗ್ರಾಮ ಅಭಿವೃದ್ಧಿ ಯೋಜನೆಯ ಅಧ್ಯಕ್ಷರಾದ ಶ್ರೀ ಪರಮಪೂಜ್ಯ ರಾಜರಿಷಿ ಪದ್ಮಭೂಷಣ ಪೂಜ್ಯ ಡಾಕ್ಟರ್ ಡಿ ವೀರೇಂದ್ರ ಹೆಗ್ಗಡೆ ಅವರಿಗೆ ಸಾರ್ವಜನಿಕರಿಂದ ತುಂಬು ಹೃದಯದ ಧನ್ಯವಾದಗಳು ಅರ್ಪಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀ ಹರೀಶ್ ಅವರು. ಊರಿನ ಮುಖಂಡರು. ವಲಯ ಮೇಲ್ವಿಚಾರಕರು ಶ್ರೀ ಸುಜಯ್. ಕೃಷಿ ಅಧಿಕಾರಿ ಉಮೇಶ್. ಸೇವಾಪ್ರತಿನಿಧಿ ಸಚಿನ್. ಚಿನ್ಮಯ್. ಊರಿನ ಸದಸ್ಯರು ಹಾಜರಿದ್ದರು

## ವಾಹನಗಳಿಗೆ ಕರ್ಕಶ ಸೈಲೆನ್ಸರ್ ಪ್ರಖರ ದೀಪ ಅಳವಡಿಕೆಗೆ ಅವಕಾಶವಿಲ್ಲ

» **ಹರಿಹರ**

ದ್ವಿಚಕ್ರ ವಾಹನಗಳಿಗೆ ಕರ್ಕಶ ಶಬ್ದ ಮಾಡುವ ಸೈಲೆನ್ಸರ್,ಶಬ್ದ ಮಾಲಿನ್ಯ ಮಾಡುವ ಹಾರನ್ ಮತ್ತು ಕಣ್ಣು ಕುಕ್ಕುವ ಪ್ರಖರ ದೀಪ ಮುಂತಾದವುಗಳ ಅಳವಡಿಸಿ ಕೊಳ್ಳಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ ಎಂದು ಪೊಲೀಸ್ ಇನ್ಸ್ ಪೆಕ್ಟರ್ ಎಸ್.ದೇವಾನಂದ್ ತಿಳಿಸಿದರು.

# ಏಡ್ಸ್ ರೋಗಿಗಳನ್ನು ಅಪರಾಧ ದೃಷ್ಟಿಯಿಂದ ನೋಡದೇ ಸಮಾನವಾಗಿ ಕಾಣಿರಿ: ಜಿಲ್ಲಾಧಿಕಾರಿ

» **ದಾವಣಗೆರೆ**

ಏಡ್ಸ್ ರೋಗಿಯನ್ನು ಅಪರಾಧಿ ದೃಷ್ಟಿಯಿಂದ ನೋಡದೇ ಸಮಾನವಾಗಿ ಕಾಣುವುದರಿಂದ ಆತ್ಮಸ್ಥೈರ್ಯ ಹೆಚ್ಚಲಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ತಿಳಿಸಿದರು.

ಬುಧವಾರ(ಫೆ.5)ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ ಹಾಗೂ ವಿವಿಧ ಇಲಾಖೆಗಳಿಂದ ಆಯೋಜಿಸಲಾಗಿದ್ದ ವಿವಿಧ ಇಲಾಖಾ ಮುಖ್ಯಸ್ಥರ ಸಮನ್ವಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಳೆದ ಹತ್ತು ವರ್ಷಗಳಲ್ಲಿ ಜಿಲ್ಲೆಯಲ್ಲಿ 0.5 ಎಚ್‌ಐವಿ ಸೋಂಕು ಪ್ರಕರಣಗಳು ಇಳಿಕೆಯಾಗಿದೆ. ಇದೇ ಅವಧಿಯಲ್ಲಿ ತಾಯಿಯಿಂದ ಮಗುವಿಗೆ ಎಚ್‌ಐವಿ ಸೋಂಕು ವರ್ಗವಾಗುವ ಪ್ರಮಾಣ ಕಡಿಮೆಯಾಗಿದೆ. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಇಲಾಖೆಗಳಲ್ಲಿದೊರೆಯುವಸೌಲಭ್ಯಗಳನ್ನು



ಹೆಚ್.ಐ.ವಿ ಸೋಂಕಿತರಿಗೆ ನೀಡಲು ಮತ್ತು ತಾರತಮ್ಯವಾಗದಂತೆ ಮುಂಜಾಗ್ರತೆ ಕ್ರಮವಹಿಸಬೇಕು ಎಂದರು.

ಹವಾಮಾನ ಬದಲಾವಣೆ ಕುರಿತು ಮಾತನಾಡಿದ ಅವರು ಜಗಳೂರಿನಲ್ಲಿ ಬೆಂಕಿ ಅನಾಹುತಗಳು ತುಂಬಾ ಸಂಭವಿಸುತ್ತಿದ್ದು, ಇದಕ್ಕೆ ಎನ್‌ಜಿಟಿ ಗೈಡ್‌ಲೈನ್ಸ್ ಪ್ರಕಾರ ಅವರಿಗೆ ಮಾರ್ಗದರ್ಶನ ನೀಡಬೇಕು. ರಸ್ತೆಗಳಲ್ಲಿ ಹುಲ್ಲಿನ ಲಾರಿಯ ಮೇಲೆ ಬೆಂಕಿ ಅವಘಡ ಸಂಭವಿಸುತ್ತಿದೆ, ಇದನ್ನು ತಡೆಯಬೇಕು. ಪ್ಲಾಸ್ಟಿಕ್ ಬಳಕೆ ನಿಷೇಧ ಮಾಡಬೇಕು. ವಿವಿಧ ಇಲಾಖೆಗಳ ಜೊತೆಗೂಡಿ ಸಂಪೂರ್ಣವಾಗಿ ಪ್ಲಾಸ್ಟಿಕ್ ಬಳಕೆ ತಡೆಗಟ್ಟಲು ಶ್ರಮಿಸಬೇಕು ಎಂದರು. ಡಾ.ಕೃತಿ ಹೆಚ್‌ಐವಿ ನಿಯಂತ್ರಣ ಕುರಿತು ಮಾಹಿತಿ ನೀಡಿ ಹೆಚ್.ಐ.ವಿ ಆಪ್ತ ಸಮಾಲೋಚನೆ ನಡೆಸಿ ಎ.ಆರ್.ಟಿ ಔಷದೋಪಚಾರವನ್ನು ಮಾಡಲಾಗುವುದು, ಡಾಟ್ಸ್ ಟಿ.ಬಿ.ಚಿಕಿತ್ಸೆ, ಸಿ.ಪಿ.ಟಿ ಔಷದೋಪಾಚಾರ, ಸಮಯ ಸಾಧಕಗಳಿಗೆ, ಸೋಂಕುಗಳಿಗೆ ಚಿಕಿತ್ಸೆ, ನಿರೋಧ್, ಐ.ಇ.ಸಿ ಪೋಸ್ಟರ್ ಮತ್ತು ಕರಪತ್ರಗಳನ್ನು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಸೋಂಕಿತ, ಬಾಧಿತ, ಐಸಿಪಿಎಸ್ ಶಿಕ್ಷಣ ಸೌಲಭ್ಯಗಳನ್ನು ನೀಡಲಾಗುವುದು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ರೇಷನ್ ಕಾರ್ಡ್, ಅಂತ್ಯೋದಯ ಕಾರ್ಡ್ಗಳನ್ನು ನೀಡಲಾಗುವುದು.

ಸೋಂಕಿತರಿಗೆ ಪ್ರತಿ ದಿನ ಸಮಾಲೋಚನೆ ಮಾಡುವುದರ ಜೊತೆ ಔಷಧಿ ನೀಡಿ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ತಾಯಿಯಿಂದ ಮಗುವಿಗೆ ಎಚ್‌ಐವಿ ಸೋಂಕು ವರ್ಗಾವಣೆಯಾಗದಂತೆ ತಡೆಯಲು ಪ್ರಮುಖ ಪಾತ್ರ ವಹಿಸುವ ನೆವರಿಪೈನ್ ಸೇರಿ ಕೆಲ ಔಷಧಿಗಳನ್ನು ನೀಡುತ್ತೇವೆ. ಶಿಶು ಜನಿಸಿದ ಬಳಿಕ ಅದರ ತೂಕದ ಅನುಸಾರ ಔಷಧಿ ನೀಡಿ, ನಿಗಾ ವಹಿಸುತ್ತೇವೆ. ನಂತರ ಹಂತಹಂತವಾಗಿ ಪರೀಕ್ಷೆಯನ್ನು ಮಾಡುತ್ತೇವೆ. ಐಸಿಟಿಸಿ ಕೇಂದ್ರಗಳಲ್ಲಿ ಎಚ್‌ಐವಿ ಸೋಂಕು ಪೀಡಿತರಿಗೆ ಸೂಕ್ತ ಮಾರ್ಗದರ್ಶನದ ಜೊತೆಗೆ ಔಷಧಿ ಕೊಡಲಾಗುತ್ತಿದೆ. ಯಾವುದೇ ಗೊಂದಲ, ಸಮಸ್ಯೆಗಳಿಗೆ ಆಸ್ಪದ ಮಾಡಿಕೊಡುತ್ತಿಲ್ಲ. ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ, ಜಿಲ್ಲಾ ಸರ್ಜನ್ ಡಾ.ನಾಗೇಂದ್ರಪ್ಪ, ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಮುರುಳೀಧರ್, ಡಾ.ಗಂಗಾಧರ ಉಪಸ್ಥಿತರಿದ್ದರು.

# ಹಿಂದುಳಿದ ಸಮಾಜಗಳು ಸರ್ಕಾರದ ಸೌಲಭ್ಯ ಸದುಪಯೋಗ ಪಡೆದು ಸಂಘಟಿತರಾಗಲಿ

» **ದಾವಣಗೆರೆ**

ಸವಿತಾ ಸಮಾಜ ಹಿಂದುಳಿದ ಸಮಾಜವಾಗಿದ್ದು, ಸಮಾಜವು ಸಂಘಟನೆಯಿಂದ ಸರ್ಕಾರದ ಸೌಲಭ್ಯಗಳನ್ನು ಬಳಸಿಕೊಂಡು ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಬೆಳೆಯಬೇಕು ಎಂದು ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಬುಧವಾರ(ಫೆ.5) ರಂದು ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾಗಿದ್ದ ಸವಿತಾ ಮಹರ್ಷಿ ಜಯಂತಿ ಉದ್ಘಾಟಿಸಿ ಮಾತಾನಾಡಿದರು. ಸವಿತಾ ಸಮಾಜದ ಪ್ರತಿಯೊಬ್ಬರೂ ಶಿಕ್ಷಣವಂತರಾಗಬೇಕು, ಆಗ ಮಾತ್ರ ಶ್ರೀಮಂತ, ಬಡವ, ಮೇಲು ಕೀಳು ಎಂಬ ಮನೋಭಾವನೆ ಬರಲು ಸಾಧ್ಯವಿಲ್ಲ. ನಾವೆಲ್ಲರೂ ಒಗ್ಗಟ್ಟಾಗಿ ಇರಬೇಕು ಸಮಾಜದಲ್ಲಿ ಇರುವಂತಹ ತೊಡಕುಗಳನ್ನು ತೊರೆದು ನಡೆದರೆ ಮಾತ್ರ ಅಭಿವೃದ್ಧಿ ಸಾಧಿಸುವುದಕ್ಕೆ ಸಾಧ್ಯವಾಗುತ್ತದೆ. ವೃತ್ತಿ ಬದುಕಿಗೆ ಅನುಕೂಲವಾಗಲು ಪರಿಕರಗಳ ಕಿಟ್ ನೀಡಲು ಮತ್ತು ಪಾಲಿಕೆಯಲ್ಲಿರುವ ಮಳಿಗೆಗಳನ್ನು ಇವರಿಗೆ ಕಡಿಮೆ ಬಾಡಿಕೆ ನೀಡಬೇಕು ಎಂದರು. ಹೊಂಡದ ಸರ್ಕಲ್‌ನಲ್ಲಿರುವ ಸಮುದಾಯದ ಭವನದ ಕಟ್ಟಡವನ್ನು ಪೂರ್ಣಗೊಳಿಸಲು ಸಚಿವರೊಂದಿಗೆ ಮಾತನಾಡಿ ಮುಂದಿನ



ಕ್ರಮ ಕೈಗೊಳ್ಳಲಾಗುತ್ತದೆ ಎಂದರು. ಸವಿತಾ ಮಹರ್ಷಿಗಳು ಸಮಾಜಮುಖಿಯಾಗಿ ಬೆಳೆದು ದಾರಿದೀಪವಾಗಿದ್ದಾರೆ.

ಇಂತಹ ಮಹಾತ್ಮರ ಜಯಂತಿಗಳನ್ನು ಆಚರಿಸುವ ಮೂಲಕ ಇವರ ಆದರ್ಶಗಳ ಹಾದಿಯಲ್ಲಿ ನಡೆಯಲು ಮಾರ್ಗದರ್ಶಿಯಾಗಿದೆ. ಸವಿತಾ ಸಮಾಜದ ಬಂಧುಗಳು ಮಹರ್ಷಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ಹೇಳಿದರು.

ಸವಿತಾ ಮಹರ್ಷಿ ಜಯಂತಿ ಆಚರಣೆಯಿಂದ ಸಮುದಾಯದ ಜನರನ್ನು ಸಂಘಟಿಸಲು ಸಹಾಯವಾಗುತ್ತದೆ. ಕಡಿಮೆ ಜನಸಂಖ್ಯೆ ಹೊಂದಿರುವ ಸವಿತಾ ಸಮಾಜದವರು ಸಂಘಟಿತರಾಗಿ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದರು. ದೂಢಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಪಾಲಿಕೆ ಮಹಾಪೌರರಾದ ಚಮನ್ ಸಾಬ್ ಕೆ, ಅಪರ ಜಿಲ್ಲಾಧಿಕಾರಿ ಪಿ.ಎನ್. ಲೋಕೇಶ್, ತಹಶೀಲ್ದಾರ್ ಅಶ್ವಥ್, ಸಂಘದ ಜಿಲ್ಲಾಧ್ಯಕ್ಷರಾದ ಬಾಲರಾಜ್, ವಕೀಲರಾದ ರಂಗಸ್ವಾಮಿ ಹಾಗೂ ಸಮಾಜದ ಎಲ್ಲಾ ಮುಖಂಡರು ಭಾಗವಹಿಸಿದ್ದರು.



ಹಿರೇಕಂದವಾಡಿಯಲ್ಲಿ 85 ಲಕ್ಷ ರೂ.ವೆಚ್ಚದಲ್ಲಿ ನಿರ್ಮಾಣವಾಗಲಿರುವ ಆರೋಗ್ಯ ಉಪ ಕೇಂದ್ರ ಕಾಮಗಾರಿಗೆ ಶಾಸಕ ಡಾ. ಎಂ.ಚಂದ್ರಪ್ಪನವರಿಂದ ಭೂಮಿ ಪೂಜೆ.

## ಚೌಳೂರು ಗ್ರಾಮದಲ್ಲಿ ಅಖಂಡ ರೈತ ಸಂಘದ ಗ್ರಾಮ ಘಟಕ ಉದ್ಘಾಟನೆ



» **ಪರಶುರಾಂಪುರ**

ರೈತರ ಹಾಗೂ ಜನಪರ ಕಾಳಜಿಯ ಹೋರಾಟಗಳು ಯಾವತ್ತಿಗೂ ಹಿಂದೆ ಸರಿಯದೆ ಆಳುವ ಸರ್ಕಾರಗಳನ್ನು ಎಚ್ಚರಿಸುವಂತಾಗಬೇಕು ಎಂದು ಅಖಂಡ ಕರ್ನಾಟಕ ರಾಜ್ಯ ರೈತ ಸಂಘ ತುಮಕೂರು ಜಿಲ್ಲಾ ಘಟಕದ ಅಧ್ಯಕ್ಷ ಪೂಜಾರಪ್ಪ ತಿಳಿಸಿದರು. ಸಮೀಪದ ಚೌಳೂರು ಗೇಟ್ ನಲ್ಲಿ ಅಖಂಡ ಕರ್ನಾಟಕ ರಾಜ್ಯ ರೈತ ಸಂಘ ತಾಲೂಕು ಘಟಕದ ವತಿಯಿಂದ ಬುಧವಾರ ಆಯೋಜಿಸಿದ್ದ ಚೌಳೂರು ಗ್ರಾಮದ ನೂತನ ಗ್ರಾಮ ಘಟಕದ ನಾಮಫಲಕ ಉದ್ಘಾಟಿಸಿ ಮಾತನಾಡಿದರು. ಚಳುವಳಿಗಳ ಪ್ರತಿಫಲಕ್ಕಾಗಿ ಒಗ್ಗಟ್ಟಿನ ಹೋರಾಟ ಬಹಳ ಮುಖ್ಯ. ರೈತರ ಹಸಿರು ಶಾಲಿಗೆ ನೂರು ಜನರ ಶಕ್ತಿ ಅಡಗಿದೆ ಎಂಬುದನ್ನು ಅರ್ಥಮಾಡಿಕೊಳ್ಳಬೇಕಿದೆ ಎಂದರು. ಸಂಘದ ತಾಲ್ಲೂಕು ಅಧ್ಯಕ್ಷ ಚಿಕ್ಕಣ್ಣ ಮಾತನಾಡಿ, ಹೋರಾಟ ಹಾಗೂ ಚಳುವಳಿ ಮೂಲಕ ಪ್ರತಿಫಲ ಪಡೆಯಲು ಎಲ್ಲರೂ ರೈತ ಹಾಗೂ ಜನಪರ ಪರ ಕಾಳಜಿಯ ಹೊಂದಬೇಕು ಎಂದರು. ಕಾರ್ಯಕ್ರಮಕ್ಕೂ ಮೊದಲು ಪರಶುರಾಂಪುರ ಸೇರಿದಂತೆ ಚೌಳೂರು ಗ್ರಾಮದ ಪ್ರಮುಖ ಬೀದಿಗಳಲ್ಲಿ ಎತ್ತಿನ ಬಂಡಿ ಹಾಗೂ ಬೈಕ್ ಜಾಥ ಮೂಲಕ ರೈತ ಮುಖಂಡರು ಜಯಘೋಷಣೆಗಳೊಂದಿಗೆ ಮೆರವಣಿಗೆ ನಡೆಸಿದರು. ಈ ವೇಳೆಯಲ್ಲಿ ಚೌಳೂರು ಗ್ರಾಮದ ಅಧ್ಯಕ್ಷ ಮುದ್ದಣ್ಣ ಕಾರ್ಯಕ್ರಮ ಅಧ್ಯಕ್ಷತೆಯನ್ನ ವಹಿಸಿದ್ದರು. ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷ ಹನುಮಂತರಾಯ, ತಾಲ್ಲೂಕು ಉಪಾಧ್ಯಕ್ಷ ಜಂಪಣ್ಣ, ಶಾಂತಣ್ಣ, ಪ್ರಧಾನ ಕಾರ್ಯದರ್ಶಿ ಹೆಚ್.ಪ್ರಕಾಶ್, ಕಾರ್ಯದರ್ಶಿ ಹನುಮಂತರಾಯ, ಖಾದರ್‌ಭಾಷಾ, ಟ್ಯಾಕ್ಟರ್ ತಿಮ್ಮಯ್ಯ, ಹೋಬಳಿ ಘಟಕದ ಅಧ್ಯಕ್ಷ ನವೀನ್‌ಗೌಡ, ಕೊಂಡ್ಲಿಪರಮೇಶ್ವರಪ್ಪ, ನರಸಿಂಹಮೂರ್ತಿ, ಹೊನ್ನಪ್ಪ, ಹಾಲರಾಮೇಶ್ವರ, ಗುರುಪಾದಸ್ವಾಮಿ, ಗೇಂಡೆತಿಮ್ಮಣ್ಣ, ಎಂ.ಲಕ್ಷ್ಮೀದೇವಿ, ರತ್ನಮ್ಮ, ಮಂಜುಮ್ಮ, ಜಯಮ್ಮ, ವೃಷಬೇಂದ್ರಪ್ಪ, ಯೋಗೇಶ್‌ಕುಮಾರ, ಆಂಜನೇಯ, ದುರುಗೇಶ, ರವಿ, ಲಿಂಗಣ್ಣ, ದೇವರಾಜ, ರಘು, ಶ್ರೀನಿವಾಸ, ಗಿರಿಜಮ್ಮ, ವೀರೇಶ್, ಶಿವಲಿಂಗಪ್ಪ ಗ್ರಾಮಸ್ಥರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

### ರಥಸಪ್ತಮಿ ಯೋಗ ತರಬೇತುದಾರರು ಮತ್ತು ಯೋಗಭ್ಯಾಸಿಗಳಿಂದ 108 ಸೂರ್ಯ ನಮಸ್ಕಾರ

# ರಥಸಪ್ತಮಿಗೆ ವೈಜ್ಞಾನಿಕ ಜತೆಗೆ ಪುರಾಣಗಳ ಉಲ್ಲೇಖಗಳು ಇವೆ

» **ಚಿತ್ರದುರ್ಗ**

ಸೂರ್ಯ ತನ್ನ ದಿಕ್ಕನ್ನ ಬದಲಿಸುವ ಕ್ರಮಕ್ಕೆ ರಥಸಪ್ತಮಿ ಎಂದು. ಈ ಅವಧಿಯಲ್ಲಿ ಸೂರ್ಯ ತನ್ನ ಪ್ರಖರತೆಯನ್ನು ಹೆಚ್ಚಿಸುವ ಕಾರಣ ಶಾಖ ಹೆಚ್ಚಾಗಿರುತ್ತದೆ. ಈ ಕಾರಣ ರಥಸಪ್ತಮಿಗೆ ವೈಜ್ಞಾನಿಕ ಜತೆಗೆ ಪುರಾಣಗಳ ಉಲ್ಲೇಖಗಳು ಉಂಟು ಎಂದು ಯೋಗಾಚಾರ್ಯ ಎಲ್.ಎಸ್ .ಚಿನ್ಮಯಾನಂದ ಅಭಿಪ್ರಾಯಪಟ್ಟರು.

ಜಿಲ್ಲಾ ಯೋಗ ಸಂಸ್ಥೆ ,ಚಿತ್ರದುರ್ಗ, ಚಿತ್ರದುರ್ಗ ರೋಟರಿ ಕ್ಲಬ್ ಫೋರ್ಟ್ ,ಇನ್ನರ್ವಿಲ್ ಕ್ಲಬ್ ಚಿತ್ರದುರ್ಗ ಫೋರ್ಟ್ ಹಾಗೂ ಚಿತ್ರದುರ್ಗ ವೀರಶೈವ ಸಮಾಜ ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ನೀಲಕಂಠೇಶ್ವರ ಸ್ವಾಮಿ ಸಮುದಾಯವನಲ್ಲಿ ಇಂದು ಬೆಳಗ್ಗೆ ರಥಸಪ್ತಮಿ ಪ್ರಯುಕ್ತ 108 ಸೂರ್ಯ ನಮಸ್ಕಾರವನ್ನು ಹಮ್ಮಿಕೊಂಡಿದ್ದ ಸಂದರ್ಭದಲ್ಲಿ ಪ್ರಸ್ತುತ ದಿನದ ವಿಷಯ ಕುರಿತು ಮಾತನಾಡುತ್ತಾ ರಥಸಪ್ತಮಿಯನ್ನು ಅಚಲ ಸಪ್ತಮಿ, ಮಾಘಸಪ್ತಮಿ ಅಥವಾ ಸೂರ್ಯ ಸಪ್ತಮಿ ಎಂದು ಕರೆಯುವರು. ಬಹು ಹಿಂದಿನಿಂದ ಆಚರಿಸಿಕೊಂಡು ಬಂದಿರುವುದು ಒಂದು ವಿಶೇಷ. ನಮ್ಮ ರಾಷ್ಟ್ರದಲ್ಲಿ ಅಲ್ಲದೆ



ಜಗತ್ತಿನ ಅನೇಕ ಭಾಗಗಳಲ್ಲಿಯೂ ರಥಸಪ್ತಮಿಯನ್ನು ಆಚರಿಸುವರು. 108 ನಾಮ ಜಪ ಅಲ್ಲದೆ ವಿಶೇಷವಾಗಿ ಯೋಗ ಸಾಧಕರು 108 ಸೂರ್ಯ ನಮಸ್ಕಾರಗಳನ್ನು ಸಾಮೂಹಿಕವಾಗಿ ಆಚರಿಸುತ್ತಾರೆ. ಸೂರ್ಯನನ್ನು ಆರೋಗ್ಯದಾತ ಎಂದು ವೇದ ಅಲ್ಲದೆ ಪುರಾಣಗಳು ಸಹ ಸೂರ್ಯನನ್ನು ರೋಗನಿವಾರಕನೆಂದು ಸಾರಿವೆ. ಸರ್ವವ್ಯಾಧಿಗಳು, ಮಹಾವ್ಯಾಧಿಗಳು ನಿವಾರಣೆಯಾಗುತ್ತದೆ ಎಂದು ಜನರಲ್ಲಿ ನಂಬಿಕೆ .ಸೂರ್ಯ ನಮಸ್ಕಾರಗಳಿಂದ ಬಲಸಂವರ್ಧನೆ ,ಆರೋಗ್ಯ, ಆಯುಷ್ಯಾಭಿವೃದ್ಧಿ. ಮನಃಶಕ್ತಿಸಂಚಯ, ಪ್ರಸನ್ನತೆ, ಉತ್ಸಾಹ, ಉಲ್ಲಾಸ ಮನಸ್ಸಿಗೆ ಆಗುತ್ತದೆ ಎಂಬುದಾಗಿ ತಿಳಿಸಿದರು.ಚಿತ್ರದುರ್ಗ ಜಿಲ್ಲಾ ಯೋಗ ಸಂಸ್ಥೆಯ ಅಧ್ಯಕ್ಷರಾದ ಎಸ್.ಜಿ.ರಂಗನಾಥ್ ಮಾತನಾಡಿ ನಮ್ಮಲ್ಲಿನ ಅಂತಃಶಕ್ತಿಯನ್ನು ಅರಿಯಲು,ಉದ್ದೀಪನಗೊಳಿಸಲು ಯೋಗ ಸಹಕಾರಿ. ಈ ಬಗ್ಗೆ ಇನ್ನೂ ಹೆಚ್ಚಿನ ಅರಿವನ್ನು ತಿಳಿಯಲು ನಾನು ಅಭ್ಯಾಸ ಮಾಡುತ್ತಿರುವುದಾಗಿ ಈ ಸಂದರ್ಭದಲ್ಲಿ ಹೇಳಿದರು.ಇನ್ನರ್ ವೀಲ್ ಕ್ಲಬ್ ಪೋರ್ಟ್‌ನ ಅಧ್ಯಕ್ಷಿಣಿ ಶ್ರೀಮತಿ ಲಕ್ಷ್ಮಿ ಮಹೇಶ್ ಸಂದರ್ಭ ಕುರಿತು ಮಾತನಾಡಿದರು. ಚಿತ್ರದುರ್ಗ ನಗರದ ವಿವಿಧ ಬಡಾವಣೆಯ ಯೋಗ ತರಬೇತುದಾರರು ಮತ್ತು ಯೋಗಭ್ಯಾಸಿಗಳು ಸೇರಿದಂತೆ ನೂರಾರು ಜನ ಭಾಗವಹಿಸಿದ್ದರು.ಈ ಸಂದರ್ಭದಲ್ಲಿ 108 ನಮಸ್ಕಾರಗಳನ್ನು 45 ನಿಮಿಷದಲ್ಲಿ ಮುಗಿಸಿದವರು ಹಲವರು. ಅವರಲ್ಲಿ ವಿಮಲಾಕ್ಷಿ, ರುಕ್ಮಿಣಿ ,ಹೇಮಲತಾ ,ಅನುಸೂಯ, ವೀರಭದ್ರಸ್ವಾಮಿ, ಸಂಪತ್ ಕುಮಾರ್, ವಿನಾಯಕ, ದಿವ್ಯಾ, ವೆಂಕಟೇಶ್, ನೇತ್ರಾ, ಅವನಿ, ಶ್ರೀದೇವಿ, ನಿರ್ಮಲ, ಪರಶುರಾಮ್, ತನುಜಾ ,ಲಕ್ಷ್ಮಿ ,ವನಜಾಕ್ಷಿ ,ಭಾಗ್ಯಮ್ಮ ,ಮೋಹನ್, ವಿಜಯಕುಮಾರ್, ಕುಸುಮ ಸೇರಿದಂತೆ ಸುಮಾರು 20ಕ್ಕೂ ಹೆಚ್ಚು ಜನ ಮಾಡಿದ್ದು ವಿಶೇಷವಾಗಿತ್ತು.ಶಂಭುಲಿಂಗಪ್ಪ ಪ್ರಾರ್ಥಿಸಿದರೆ ಶಿಕ್ಷಣ ಇಲಾಖೆಯ ಸಂಪತ್ ಕುಮಾರ್ ಸ್ವಾಗತಿಸಿದರು. ಶಿಕ್ಷಕಿ ನಳಿನಾಕ್ಷಿ ಕಾರ್ಯಕ್ರಮ ನಿರ್ವಹಿಸಿದರು. ವೀರಭದ್ರಸ್ವಾಮಿ ವಂದಿಸಿದರು.

## ಫಾಸ್ಟ್ ನ್ಯೂಸ್


### ಕಲಮರಹಳ್ಳಿ: ಪರಿಶಿಷ್ಟ ಜಾತಿ ರೈತರಿಗೆ ಸಿರಿಧಾನ್ಯ ಬೆಳೆಗಳ ಮೌಲ್ಯವರ್ಧನೆ ಜಾಗೃತಿ ಶಿಬಿರ



» ಚಳ್ಳಕೆರೆ

ಆರ್ಥಿಕವಾಗಿ ರೈತರನ್ನು ಸದೃಢಗೊಳಿಸುವ ನಿಟ್ಟಿನಲ್ಲಿ ಕೃಷಿ ಇಲಾಖೆ ಅನೇಕ ಕಾರ್ಯಕ್ರಮಗಳನ್ನು ರೂಪಿಸಿದೆ. ವಿಶೇಷವಾಗಿ ಪರಿಶಿಷ್ಟ ಜಾತಿ ರೈತ ಸಮುದಾಯ ಸಬಲೀಕರಣಕ್ಕಾಗಿ ಸಿರಿದಾನ್ಯ ಬೆಳೆಗಳನ್ನು ಬೆಳೆಯಲು ವಿಶೇಷ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ. ಸಿರಿಧಾನ್ಯಗಳು ನಮ್ಮೆಲ್ಲರ ಆರೋಗ್ಯದ ಸಿರಿಯನ್ನು ಸಂರಕ್ಷಿಸಲಿದೆ ಎಂದು ಕೆಳದಿಶಿವಪ್ಪನಾಯಕ ಕೃಷಿ ವಿಶ್ವವಿದ್ಯಾಲಯದ ಪ್ರಾಧ್ಯಾಪಕಿ ಡಾ.ನಂದಿನಿ ತಿಳಿಸಿದರು. ಅವರು, ತಾಲ್ಲೂಕಿನ ಬೆಳಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಲಮರಹಳ್ಳಿ ಗ್ರಾಮದಲ್ಲಿ ಕೆಳದಿಶಿವಪ್ಪನಾಯಕ ಕೃಷಿ ವಿಶ್ವವಿದ್ಯಾಲಯ, ಹಿರಿಯೂರು ಬಬ್ಬೂರು ಫಾರಂ, ಗ್ರಾಮದ ಶ್ರೀಮು ಕ್ತಾರಂಗಕಲಾವೇದಿಕೆಸಮಿತಿಟ್ರಸ್ಟ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಪರಿಶಿಷ್ಟ ಜನಾಂಗದ ರೈತರಿಗೆ ಹಮ್ಮಿಕೊಂಡಿದ್ದ ಸಿರಿಧಾನ್ಯ ಬೆಳೆಗಳ ಮೌಲ್ಯವರ್ದನೆ ಕುರಿತು ಹಮ್ಮಿಕೊಂಡಿದ್ದ ರೈತ ಜಾಗೃತಿ, ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಯ ರೈತರಿಗೆ ಸಾಮೆ ಬೀಜ ವಿತರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ರೈತ ಸಮುದಾಯ ಕೃಷಿಯಲ್ಲೂ ಬದಲಾವಣೆಯನ್ನು ಕಾಣುವ ಅವಕಾಶ ಒದಗಿಬಂದಿದ್ದು, ಇದರ ಸದುಪಯೋಗವನ್ನು ಪಡೆಯುವಲ್ಲಿ ರೈತರು ಮುಂದಾಗಬೇಕೆಂದರು. ಪ್ರಾಧ್ಯಾಪಕಿ ವೀಣಾ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಸಿರಿಧಾನ್ಯಗಳ ಬೆಳೆಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಂಡಿರುವುದು ಸಂತಸ ತಂದಿದೆ. ಗ್ರಾಮದ ಸುತ್ತಮುತ್ತಲಿತ ನೂರಾರು ಸಂಖ್ಯೆಯ ರೈತರು ಆಗಮಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದೀರ, ವಿಶೇಷವಾಗಿ ಪರಿಶಿಷ್ಟ ಜಾತಿಯ ರೈತರಿಗೆ ಸಿರಿಧಾನ್ಯಬೆಳೆಗಳ ಬಗ್ಗೆ ಅರಿವು ಮೂಡಿಸಲು ಈ ಕಾರ್ಯಕ್ರಮ ಆಯೋಜಿಸಿದೆ. ಸಿರಿಧಾನ್ಯಗಳ ಬೆಳೆದು ಆರ್ಥಿಕವಾಗಿ ಸಬಲರಾಗಲು ರೈತರು ಮುಂದೆ ಬರಬೇಕಿದೆ. ಕೃಷಿ ಚಟುವಟಿಕೆಗಳಲ್ಲಿ ಹೆಚ್ಚಿನ ಆಸಕ್ತಿ ಮೂಡಲು ಇಂತಹ ಕಾರ್ಯಕ್ರಮ ಸಹಕಾರಿ ಎಂದರು. ಗ್ರಾಮ ಮುಖಂಡರಾದ ಪಟೇಲ್‌ರಾಮಚಂದ್ರಪ್ಪ, ರವಿಶಂಕರ, ಮಣಿಕಾಂತ, ಕೆ.ಟಿ.ತಿಪ್ಪೇಸ್ವಾಮಿ, ಮಾರಜ್ಜ, ಪುಟ್ಟರಾಜು ಮುಂತಾದವರು ಭಾಗವಹಿಸಿದ್ದರು.

### ಕ್ಯಾನ್ಸರ್ ಬೇಗ ಪತ್ತೆ ಮಾಡಿದರೆ ಅದನ್ನು ತಡೆಯುವುದು ಸುಲಭ




» ಚಿತ್ರದುರ್ಗ

ಕ್ಯಾನ್ಸರ್ ಇರುವುದನ್ನು ಬೇಗ ಪತ್ತೆ ಮಾಡಿದರೆ ಅದನ್ನು ತಡೆಯುವುದು ಸುಲಭ ಆದರೆ ಸಮಯ ಮೀರಿ ಹೋದಾಗ ವೈದ್ಯರ ಚಿಕಿತ್ಸೆ ನಾಟುವುದು ಕಷ್ಟವಾಗುತ್ತದೆ. ಮಹಿಳೆಗೆ ಸ್ತನದ ಕ್ಯಾನ್ಸರ್ ಮತ್ತು ಸರ್ವೈಕಲ್ ಕ್ಯಾನ್ಸರ್ ತೀವ್ರವಾಗಿ ಕಾಡುತ್ತಿವೆ ಇದರ ಬಗ್ಗೆ ಅರಿವು ಮತ್ತು ಜಾಗೃತಿ ಮೂಡಿಸುವುದು ನಮ್ಮೆಲ್ಲರ ಹೊಣೆ ಎಂದು ಬಸವೇಶ್ವರ ಮೆಡಿಕಲ್ ಕಾಲೇಜಿನ ಡಾ ಅಶ್ವಿನಿ ಜಿಎಸ್ ತಿಳಿಸಿದರು. ನಗರದ ಎಸ್‌ಜೆಎಂಫಾರ್ಮಸಿ ಕಾಲೇಜಿನಲ್ಲಿ ವಿಶ್ವ ಕ್ಯಾನ್ಸರ್‌ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ವರ್ಷ ವಿಶ್ವ ಆರೋಗ್ಯ ಸಂಸ್ಥೆ ಮೂರು ವರ್ಷದ ಮಟ್ಟಿಗೆ ಕ್ಯಾನ್ಸರ್ ಅನ್ನು ತಡೆಯಲು ಮತ್ತು ನಿರ್ವಹಣೆಗಾಗಿ ವೇದವಾಕ್ಯವನ್ನು ಸೂಚಿಸಿದೆ "ಯುನೈಟೆಡ್ ಬೈ ಯೂನಿಕ್" ಅಂದರೆ ಒಬ್ಬ ರೋಗಿಗಿಂತ ಇನ್ನೊಬ್ಬ ರೋಗಿಯು ವಿಭಿನ್ನವಾಗಿ ರೋಗ ಚಿಕಿತ್ಸಾ ನಿರ್ವಹಣೆ ಮಾಡಬೇಕಾಗುತ್ತದೆ ಮತ್ತ ರೋಗ ತಡೆಯಲು ಕ್ಯಾನ್ಸರ್ ಬಗ್ಗೆ ಅರಿವು ಮತ್ತು ಜಾಗೃತಿಯನ್ನು ಎಲ್ಲರೂ ಹೊಂದುವುದು ಮತ್ತು ಇತರರಿಗೆ ತಿಳಿಸುವುದು ಪ್ರತಿಯೊಬ್ಬರ ಹೊಣೆ ಎಂದು ಹೇಳಿದರು. ಕ್ಯಾನ್ಸರ್ ರೋಗ ಎರಡನೇ ಮಹಾಮಾರಿ ರೋಗವಾಗಿ ಹೊರಹೊಮ್ಮುತ್ತಿರುವುದಕ್ಕೆವಿಷಾದವ್ಯಕ್ತಪಡಿಸಿದರು. ಭಾರತದಲ್ಲಿ ಸರಿಸುಮಾರು ಗರ್ಭಕಂಠದ ಕ್ಯಾನ್ಸರ್‌ಗೆ (ಸರ್ವೈಕಲ್ ಕ್ಯಾನ್ಸರ್) ವರ್ಷಕ್ಕೆ 67,000 ಮಹಿಳೆಯರು ಸಾವನ್ನಪ್ಪುತ್ತಿದ್ದಾರೆ, ಸರಾಸರಿ ಪ್ರತಿ ಎಂಟು ನಿಮಿಷಕ್ಕೆ ಒಬ್ಬ ಮಹಿಳೆ ಈ ಕ್ಯಾನ್ಸರ್ ಗೆ ತುತ್ತಾಗುತ್ತಿದ್ದಾಳೆ. ಇದಕ್ಕೆ ಕಾರಣ HPV ವೈರಾಣು. ರೋಗಲಕ್ಷಣಗಳು ಇದ್ದರೂ ವೈದ್ಯರ ಸಲಹೆ ಮತ್ತು ಸೂಚನೆಗೆ ಬರದೇ ಇರುವುದು. ಕ್ಯಾನ್ಸರ್ ಬಾರದಂತೆ ತಡೆಯಲು ಲಸಿಕೆಗಳು ಇದ್ದರು ತೆಗೆದುಕೊಳ್ಳದೆ ಇರುವುದು ಹಾಗೂ ಚಿಕಿತ್ಸೆಗೆ ತಗಲುವ ವೆಚ್ಚವನ್ನು ಭರಿಸಲು ಆಗದೆ ಹೋಗುವುದು ಸರ್ವೇಸಾಮಾನ್ಯವಾಗಿದೆ.

# ಕಾಂಗ್ರೆಸ್ ಪಕ್ಷ ಸಂಘಟನೆ ನಿರಂತರವಾಗಿರಲಿ

» ಚಿತ್ರದುರ್ಗ

ಪಕ್ಷದ ಕಾರ್ಯಕರ್ತರ ಪರಿಶ್ರಮದಿಂದ ಜಿಲ್ಲೆಯಲ್ಲಿ 6 ವಿಧಾನಸಭಾ ಸ್ಥಾನಗಳಲ್ಲಿ 5 ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸಿದ್ದಾರೆ. ಇದಕ್ಕೆ ಪಕ್ಷ ಕಾರ್ಯಕರ್ತರಿಗೆ ಅಭಾರಿಯಾಗಿದೆ ಎಂದು ಅಖಿಲ ಭಾರತ ಕಾಂಗ್ರೆಸ್ ಸಮಿತಿ ರಾಷ್ಟ್ರೀಯ ಕಾರ್ಯದರ್ಶಿ ಮಯೂರ ಜಯಕುಮಾರ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರಹಮ್ಮಿಕೊಂಡಿದ್ದಗಾಂಧಿಭಾರತ, ಪಂಚಾಯಿತಿ ಮತ್ತು ವಾರ್ಡ್ ಸಮಿತಿಗಳ ಹಾಗೂ ಮುಂಬರುವ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆ ಪ್ರಯುಕ್ತ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.ನಾವು ಕಳೆದ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ಪಕ್ಷದ ಸಂಘಟನೆಯನ್ನು ಚುನಾವಣೆಯ ಪೂರ್ವದಲ್ಲಿಯೇ ಸಂಘಟನೆಯನ್ನು ಶುರು ಮಾಡಿದ್ದೇವು. ಅದರ ಪರಿಣಾಮವಾಗಿ ರಾಜ್ಯದಲ್ಲಿ 135 ಸ್ಥಾನಗಳನ್ನು ಗೆದ್ದು ಪಕ್ಷ ಅಧಿಕಾರಕ್ಕೆ ಬಂದಿತು.

ಕಳೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ನಾವು ಸಂಘಟನೆಯನ್ನು ತಡವಾಗಿ ಪ್ರಾರಂಭಿಸಿದ ಪರಿಣಾಮ ಚುನಾವಣೆಯಲ್ಲಿ ಸೋಲಬೇಕಾಯಿತು. ಆದ್ದರಿಂದ ತಾಲೂಕು ಹಾಗೂ ಜಿಲ್ಲಾ ಪಂಚಾಯಿತಿಯ ಚುನಾವಣೆಯ ಇನ್ನೂ ಪ್ರಾರಂಭವಾಗಲು ಸಮಯ ಇರುವುದರಿಂದಲೇ ಈಗಿನಿಂದಲೇ ಪಕ್ಷ ಸಂಘಟನೆಯನ್ನು ಮಾಡಿದರೆ ನಮ್ಮ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸಲು ಸಾಧ್ಯವಾಗುತ್ತದೆ ಎಂದರು.



ಕಾಂಗ್ರೆಸ್ ಪಕ್ಷ ತಾಯಿ ಹೃದಯ ಇರುವಂತ ಪಕ್ಷ. ಪಕ್ಷ ಯಾವತ್ತೂ ಕಾರ್ಯಕರ್ತರಿಗೆ ಅನ್ಯಾಯ ಮಾಡಿಲ್ಲ..ಪಕ್ಷದಲ್ಲಿ ಸಂಘಟನೆಯು ಸದೃಢವಾಗಿದ್ದರೆ.

ಆಡಳಿತ ಸದೃಢವಾಗಿರುತ್ತೆ.ಪಕ್ಷದಲ್ಲಿನ ದೊಡ್ಡ ನಾಯಕರುಗಳು ಶಾಸಕರುಗಳು, ಸಚಿವರು, ನಿಗಮ ಮಂಡಳಿಯ ಅಧ್ಯಕ್ಷರಾಗುತ್ತಾರೆ ಆದರೆ ಸಾಮಾನ್ಯ ಕಾರ್ಯಕರ್ತರಿಗೆ ಆ ಸ್ಥಾನಮಾನ ಸಿಗಬೇಕು.

ನಾನು ಈ ಬಗ್ಗೆ ಕಮಿಟಿಯ ಗಮನಕ್ಕೆ ತರುತ್ತೇನೆ.ಕಾಂಗ್ರೆಸ್ ಪಕ್ಷ ಒಂದು ಕುಟುಂಬವಿದ್ದಂತೆ.. ಕುಟುಂಬ ನಮಗೆ ಏನು ಮಾಡಿದೆ ಎನ್ನುವ ಬದಲು. ಕುಟುಂಬಕ್ಕೆ ನಾವು ಏನು ಮಾಡಿದ್ದೇವೆ ಎಂಬುದು ಮುಖ್ಯ.. ಆದರೆ ಕುಟುಂಬ ನಮ್ಮ ಬೆಂಬಲಕ್ಕೆ ಸದಾ ಇರುತ್ತದೆ ಎಂದು ತಿಳಿಸಿದರು.

ನಿಮಗೆ ಸಭೆಯ ಬಗ್ಗೆ ನಿರ್ದೇಶನ ಇದ್ದರೂ ಸಹ ಬಹಳಷ್ಟು ಜನ ಬಂದಿಲ್ಲ.. ನೀವು ಶಿಸ್ತಿನಿಂದ ಇದ್ದರೆ ಒಳ್ಳೆಯದು. ಇಲ್ಲ ಅಂದರೆ ನನಗೆ ಶಿಸ್ತು ಕಲಿಸುವುದು ಗೊತ್ತು.ಜಿಲ್ಲಾಧ್ಯಕ್ಷರಿಗೆ ಈಗಾಗಲೇ ನಿರ್ದೇಶನ ನೀಡಿದ್ದೇನೆ ಸಭೆಗೆ ಗೈರು ಹಾಜಾರಾದವರಿಗೆ ಶೋಕಸ್ ನೋಟೀಸ್ ನೀಡಲಿಕ್ಕೆ ಸೂಚಿಸಿದ್ದೇನೆ ಎಂದ ಅವರು ಜಿಲ್ಲೆಯಲ್ಲಿ 32 ಜಿಲ್ಲಾ ಪಂಚಾಯಿತಿ ಸದಸ್ಯ ಸ್ಥಾನಗಳಿವೆ.ಪ್ರತಿ ಸದಸ್ಯ ಸ್ಥಾನಕ್ಕೂ ಒಬ್ಬ ಪಕ್ಷದ ಕೋ ಆರ್ಡಿನೇಟರನ್ನು ನೇಮಕ ಮಾಡಲಾಗುವುದು. ನಮ್ಮ ಸರ್ಕಾರದ ಎಲ್ಲಾ ಗ್ಯಾರಂಟಿಗಳು ಜನರಿಗೆ ತಲುಪಬೇಕು.. ನಮ್ಮ ಪಕ್ಷದ ಸಾಧನೆಗಳನ್ನು ಜನರಿಗೆ ಮನವರಿಕೆ ಮಾಡಿಕೊಟ್ಟರೆ ನಮ್ಮ ಬೆಂಬಲಕ್ಕೆ ಜನ ನಿಲ್ಲುತ್ತಾರೆ ಎಂದು ಹೇಳಿದರು.

ಡಿಸಿಸಿ ಅಧ್ಯಕ್ಷ ತಾಜ್‌ಪೀರ್ ಮಾತನಾಡಿ, ಈಗಾಗಲೇ ವಿಧಾನಸಭೆಯಲ್ಲಿ ಜಿಲ್ಲೆಯಲ್ಲಿ 5 ಸ್ಥಾನಗಳನ್ನು ಗೆಲ್ಲಲಾಗಿದೆ, ಲೋಕಸಭಾ ಸ್ಥಾನ ಕಡಿಮೆ ಅಂತರದಿಂದ ಕೈ ತಪ್ಪಿದೆ. ಈಗ ಮುಂಬರುವ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳು ಗೆಲ್ಲುವನ್ನು ಸಾಧಿಸಿ ಅಧಿಕಾರವನ್ನು ಹಿಡಿಯಬೇಕಿದೆ ಇದಕ್ಕೆ ಈಗಿನಿಂದಲೇ ತಯಾರಿಯನ್ನು ಮಾಡಿಕೊಳ್ಳಬೇಕಿದೆಕ್ಷೇತ್ರದಬಗ್ಗೆಸರಿಯಾದ ಮಾಹಿತಿಯನ್ನು ಹೊಂದಿದವರು ಅಲ್ಲಿ ಜನಪ್ರಿಯತೆಯನ್ನು ಗಳಿಸಿದವರನ್ನು ಗುರುತಿಸುವ ಕಾರ್ಯವಾಗ ಬೇಕಿದೆ ಎಂದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಜೆಜೆಹಟ್ಟಿ ತಿಪ್ಪೇಸ್ವಾಮಿ ಮಾತನಾಡಿ, ಮುಂಬರುವ ಚುನಾವಣೆಯಲ್ಲಿ ನಮ್ಮ ಪಕ್ಷ ಗೆಲುವನ್ನು ಸಾಧಿಸಿ ಅಧಿಕಾರವನ್ನು ಹಿಡಿಯಬೇಕಿದೆ, ಇದಕ್ಕಾಗಿ ಈಗಿನಿಂದಲೇ ಶ್ರಮವನ್ನು ಹಾಕಬೇಕಿದೆ. ಬೇರೆ ಪಕ್ಷದವರು ಚುನಾವಣಾ ಸಮಯದಲ್ಲಿ ವಿವಿಧ ರೀತಿಯಬ ತಂತ್ರಗಾರಿಕೆಯನ್ನು ಮಾಡುವುದರಮೂಲಕಚುನಾವಣೆಯನ್ನು ಗೆಲ್ಲುತ್ತಿದ್ದಾರೆ ಇದಕ್ಕೆ ಪ್ರತಿಯಾಗಿ ನಾವು ಸಹಾ ತಂತ್ರಗಾರಿಕೆಯನ್ನು ಮಾಡಿ ಜನರ ಸ್ನೇಹವನ್ನು ಸಂಪಾದಿಸಿ ಗೆಲುವನ್ನು ಸಾಧಿಸಬೇಕಿದೆ ಎಂದರು. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್, ದ್ರಾಕ್ಷರಸ ಮಂಡಳಿ ಅಧ್ಯಕ್ಷ ಯೋಗಿಶ್ ಬಾಬು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಕುಮಾರಗೌಡ, ಮಹಿಳಾ ಘಟಕದ ಅಧ್ಯಕ್ಷೆ ಗೀತಾ ನಂದಿನಿಗೌಡ, ಪ್ರಕಾಶ್, ಉಲ್ಲಾಸ ಕಾರೇಹಳ್ಳಿ, ಲಕ್ಷ್ಮೀಕಾಂತ, ಖುದ್ದುಸ್, ಎನ್.ಡಿ.ಕುಮಾರ್, ಚಾಂದ್ . ಇಂದಿರಾ ನಜ್ಮಾತಾಜ್ ಭಾಗವಹಿಸಿದ್ದರು.

# ಶೋಷಣೆ ಮೆಟ್ಟಿ ನಿಲ್ಲಬೇಕಾದರೆ ಮೊದಲು ಹೆಣ್ಣು ಶಿಕ್ಷಣವಂತಳಾಗಬೇಕು: ಡಾ.ನಾಗಲಕ್ಷ್ಮಿ ಚೌಧರಿ

» ಚಿತ್ರದುರ್ಗ

ಶೋಷಣೆಯನ್ನು ಮೆಟ್ಟಿ ನಿಲ್ಲಬೇಕಾದರೆ ಮೊದಲು ಹೆಣ್ಣು ಶಿಕ್ಷಣವಂತಳಾಗಿ ಸ್ವಾವಲಂಭಿ ಬದುಕು ಕಟ್ಟಿಕೊಳ್ಳಬೇಕೆಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ವಿದ್ಯಾರ್ಥಿನಿಯರಿಗೆ ಕರೆ ನೀಡಿದರು.

ಬಾಪೂಜಿ ಸಮೂಹ ಸಂಸ್ಥೆಗಳು ಹಾಗೂ ಪೊಲೀಸ್ ಬೇಟೆ ವಾರ ಪತ್ರಿಕೆ ಇವುಗಳ ಸಹಯೋಗದೊಂದಿಗೆ ರಾಷ್ಟ್ರೀಯ ಹೆದ್ದಾರಿ-13 ರಲ್ಲಿರುವಬಾಪೂಜಿಶಿಕ್ಷಣಮಹಾವಿದ್ಯಾಲಯದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಮಹಿಳೆಯರ ಸಬಲೀಕರಣ ಎತ್ತ ಸಾಗಿದೆ ಎಂಬ ವಿಚಾರ ಕುರಿತ ಉಪನ್ಯಾಸ-ಸಂವಾದ ಉದ್ಘಾಟಿಸಿ ಮಾತನಾಡಿದರು.ನೋವು ತಡೆಯುವ ಶಕ್ತಿ ಚೈತನ್ಯವುಳ್ಳ ಹೆಣ್ಣಿಗೆ ಅವಕಾಶವಿಲ್ಲ. ಮಹಿಳೆಗೆ ಶೇ.33 ಪರ್ಸೆಂಟ್ ಮೀಸಲಾತಿ ಘೋಷಿಸಿದೆ. ಇದು ಸಾಲದು. ಶೇ.ಐವತ್ತರಷ್ಟು ಮೀಸಲಾತಿ ಬೇಕು. ಹೆಣ್ಣು ಮೀಸಲಾತಿಯನ್ನು ಬೇಡಬಾರದು ಕಿತ್ತುಕೊಳ್ಳಬೇಕು ಎಂದು ಜಾಗೃತಿಗೊಳಿಸಿದರು.

ಮಹಿಳಾ ಪರ ಮೊಟ್ಟ ಮೊದಲ ಕಾನೂನು ಜಾರಿಗೆ ತಂದಿದ್ದು, ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್. ಮಹಿಳೆಯ ಪರ ನಿಲ್ಲದ ಯಾವ ಸರ್ಕಾರವೇ ಇರಲಿ ಚುನಾವಣೆಯಲ್ಲಿ ಮಂಡಿಯೂರಿಸಿ ಮನೆಗೆ ಕಳಿಸುವ ಶಕ್ತಿ ಹೆಣ್ಣಿಗಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀಡಿರುವ ಐದು ಉಚಿತ ಗ್ಯಾರೆಂಟಿಗಳು ಹೆಣ್ಣನ್ನು ಸಬಲೀಕರಣಗೊಳಿಸುತ್ತಿದೆ. ಗೃಹಲಕ್ಷ್ಮಿ ಬಾಳು ಕೊಟ್ಟಿದೆ. ಸರ್ಕಾರದಲ್ಲಿ ಏನೆಲ್ಲಾ ಯೋಜನೆಗಳಿದೆ.



ಎಷ್ಟು ಸಬ್ಸಿಡಿ ಸಿಗುತ್ತದೆ. ಜಿಲ್ಲಾಧಿಕಾರಿಯಿಂದ ಹಿಡಿದು ಜಿಲ್ಲಾ ಮಟ್ಟದ ಅಧಿಕಾರಿಗಳು ಯಾರ‍್ಯಾರಿದ್ದಾರೆನ್ನುವುದನ್ನು ತಿಳಿದುಕೊಳ್ಳಬೇಕು. ಸರ್ಕಾರವೆಂದರೆ ಜನ. ಅಧಿಕಾರಿಗಳೆಂದರೆ ಜನರ ಸೇವಕರು ಎನ್ನುವುದನ್ನು ವಿದ್ಯಾರ್ಥಿಗಳು ಮೊದಲು ತಿಳಿದುಕೊಂಡಿರಬೇಕು ಎಂದರು.

ನಿಮಗೆ ಏನಾದರೂ ತೊಂದರೆಯಾದರೆ ರಕ್ಷಣೆಗೆ ಕಾವಲು ಸಮಿತಿಯಿದೆ. ಶಿಕ್ಷಣವೆಂದರೆ ಕೇವಲ ಪುಸ್ತಕ, ಪದವಿಯಲ್ಲ. ಜ್ಞಾನ, ತಾಳ್ಮೆ, ಸೇವೆ, ದೇಶಭಕ್ತಿಯೇ ನಿಜವಾದ ಶಿಕ್ಷಣ. ಹೆಣ್ಣಿಗೆ ಜೀವನದಲ್ಲಿ ಗೌರವ, ಪ್ರೋತ್ಸಾಹ, ಅವಕಾಶ ಸಿಗಬೇಕು. ನಿಮ್ಮ ಮೇಲೆ ಯಾರಾದರೂ ದೌರ್ಜನ್ಯ, ದಬ್ಬಾಳಿಕೆ, ಹಲ್ಲೆ, ಲೈಂಗಿಕ ಕಿರುಕುಳ ನೀಡಿದರೆ ಹೆದರುವ ಅಗತ್ಯವಿಲ್ಲ. ಧೈರ್ಯದಿಂದ ಪೊಲೀಸ್ ಠಾಣೆಗೆ ಹೋಗಿ ದೂರು ಸಲ್ಲಿಸಿ. ಶಿಕ್ಷಣ ಪಡೆದು ಹೆಣ್ಣು ಮನೆಯಲ್ಲಿ ಕುಳಿತರೆ ಪ್ರಯೋಜನವಿಲ್ಲ. ಕೆಲಸ ಮಾಡಿ ಹಣ ಸಂಪಾದಿಸಿ ತನ್ನ ಕಾಲ ಮೇಲೆ ತಾನು ನಿಂತಾಗ ಜೀವನದಲ್ಲಿ ಎಂತಹ ಸಮಸ್ಯೆ, ಸವಾಲು ಎದುರಾದರೂ ಮೆಟ್ಟಿ ನಿಲ್ಲಬಹುದು ಎಂದು ವಿದ್ಯಾರ್ಥಿನಿಯರಿಗೆ ಡಾ.ನಾಗಲಕ್ಷ್ಮಿ ಚೌಧರಿ ಕಿವಿಮಾತು ಹೇಳಿದರು.

ಪ್ರತಿ ಐದು ಸೆಕೆಂಡಿಗೊಂದು ಸೈಬರ್ ಕ್ರೈಂ ನಡೆಯುತ್ತಿದೆ. ಮೊಬೈಲ್ ಫೋನ್‌ಗಳಿಂದ ಅಪರಾಧಗಳು ಹೆಚ್ಚುತ್ತಿವೆ. ಭಯಪಟ್ಟರೆ ಶೋಷಣೆ ನಿಲ್ಲುವುದಿಲ್ಲ. ಸಮಯ ಬಂದಾಗ ಪ್ರಶ್ನೆ ಮಾಡುವ ಎದೆಗಾರಿಕೆ ಬೆಳೆಸಿಕೊಳ್ಳಿ. ಸ್ವಾವಲಂಭಿಗಳಾಗುವತನಕ ವಿವಾಹವಾಗಬೇಡಿ ಎಂದರು.

# ಸವಿತಾಮಹರ್ಷಿಗಳ ಆದರ್ಶ ಪರಿಪಾಲನೆಯಲ್ಲಿ ನಾವೆಲ್ಲರೂ ಮುಂದಾಗೋಣ: ಟಿ.ರಘುಮೂರ್ತಿ



» ಚಳ್ಳಕೆರೆ

ಸಮಾಜದ ಎಲ್ಲಾ ವರ್ಗದ ಜನರಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವಲ್ಲಿ ಅನೇಕ ಮಹರ್ಷಿಗಳು ತಮ್ಮದೆಯಾದ ಸೇವೆ ಸಲ್ಲಿಸಿದ್ದಾರೆ. ಪ್ರತಿಯೊಬ್ಬ ವ್ಯಕ್ತಿಯೂ ಸಮಾಜಕ್ಕಾಗಿ ಸೇವೆ ಮಾಡಬೇಕೆಂಬ ಸಂಕಲ್ಪವನ್ನು ಮಾಡಿಸುವಲ್ಲಿ ಸವಿತಾಮಹರ್ಷಿಗಳು ಎಲ್ಲರಿಗೂ ಸ್ಪೂರ್ತಿಯಾಗುತ್ತಾರೆ. ಸವಿತಾಮಹರ್ಷಿಗಳ ಆದರ್ಶ ಪಾಲನೆಗೆ ನಾವೆಲ್ಲರೂ ಒತ್ತು ನೀಡಬೇಕೆಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು. ಅವರು, ಬುಧವಾರ ತಾಲ್ಲೂಕು ಕಚೇರಿ ಆವರಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ಸವಿತಾಮಹರ್ಷಿಗಳ ಜಯಂತಿ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಅರ್ಪಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಸಮಾಜದಲ್ಲಿ ಆಳಾವಾಗಿ ಬೇರೂರಿದ್ದ ಸಂಕುಚಿತ ಭಾವನೆಗಳನ್ನು ಹೋಗಲಾಡಿಸಲು ಸವಿತಾಮಹರ್ಷಿಗಳು ತಮ್ಮದೇಯಾದ ವಿಶೇಷ ಕಾರ್ಯಗಳ ಮೂಲಕ ಜಾಗೃತಿ ಮೂಡಿಸಿದ್ದಾರೆ. ನಾಡಿನ ಸವಿತಾಸಮಾಜದ ದೈವವಾದ ಸವಿತಾಮಹರ್ಷಿಗಳ ಜಯಂತಿ ಆಚರಣೆ ಸರ್ಕಾರ ಅನುವು ಮಾಡಿಕೊಟ್ಟಿರುವುದು ಸಂತಸ ವಿಷಯ ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಶಿರಸ್ತೇದಾರ್ ಸದಾಶಿವಪ್ಪ, ಸರ್ಕಾರ ಅನೇಕ ದಾರ್ಶನಿಕರ ಜಯಂತಿ ಕಾರ್ಯಕ್ರಮಗಳನ್ನು ಆಚರಣೆ ಮಾಡುವ ಮೂಲಕ ಅವರು ನಾಡಿಗೆ ಸಲ್ಲಿಸಿದ ಸೇವೆಯ ಬಗ್ಗೆ ನೆನಪಿಸಿಕೊಳ್ಳುವಂತಹ ಅವಕಾಶವನ್ನು ಎಲ್ಲರಿಗೂ ಮಾಡಿಕೊಟ್ಟಿದೆ.

## ಪ್ರಮುಖ ಸುದ್ದಿ

# ಶರಣು ಎಂದವರಿಗೆ ಮರಣವಿಲ್ಲ: ಬಸವಕುಮಾರ ಸ್ವಾಮೀಜಿ

» ಚಿತ್ರದುರ್ಗ

ಶರಣು ಎಂದವರಿಗೆ ಮರಣವಿಲ್ಲ. ಕೆಟ್ಟ ಶಬ್ದಗಳನ್ನು ಮಾತನಾಡಬಾರದು. ಇಂದಿನ ಸಂಬಂಧಗಳು ದುರಂತದ ಕಡೆಗೆ ಸಾಗುತ್ತಿರುವುದು ಅತ್ಯಂತ ಕಳವಳಕಾರಿಯಗಿದೆ. ಸಂಸಾರದಲ್ಲಿ ಹೆಂಡತಿ ಅಂದರೆ ಗುಲಾಮಳು ಎಂದುಕೊಳ್ಳಬಾರದು ಎಂದು ಮುರುಘಾ ಮಠದ ಆಡಳಿತ ಮಂಡಳಿ ಸದಸ್ಯ ಡಾ. ಬಸವಕುಮಾರ ಸ್ವಾಮೀಜಿ ಹೇಳಿದರು.

ನಗರದ ಬಸವಕೇಂದ್ರ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ನಡೆದ 35ನೇ ವರ್ಷದ ಎರಡನೇ ತಿಂಗಳ ಸಾಮೂಹಿಕ ಕಲ್ಯಾಣ ಮಹೋತ್ಸವದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ದೇಶದ ಸಂಸ್ಕೃತಿಯಲ್ಲಿ ಹೆಣ್ಣಿಗೆ ಅಪಾರ ಗೌರವವನ್ನು ನೀಡಲಾಗಿದೆ. ಕುಟುಂಬದಲ್ಲಿ ಪತಿಯು ಸಹ ಅನೇಕ ರೀತಿಯ ಜವಾಬ್ದಾರಿಗಳನ್ನು ನಿರ್ವಹಿಸುತ್ತಾನೆ. ಹಾಗಾಗಿ ಗಂಡ-ಹೆಂಡತಿ ಮಧ್ಯೆ ಸಾಮರಸ್ಯ ಕಾಪಾಡಿಕೊಳ್ಳುವುದು ಅತಿಮುಖ್ಯ ಎಂದು ಹೇಳಿದರು.

ವಿವಾಹ ಎನ್ನುವುದು ಪವಿತ್ರವಾದ ಸಂಬಂಧ. ಇದ್ದುದರಲ್ಲಿ ನೆಮ್ಮದಿಯಾಗಿ ಬದುಕು ಸಾಗಿಸಬೇಕು. ಜನಸಾಮಾನ್ಯರ ಸಮಸ್ಯೆಗಳಿಗೆ ಸ್ಪಂದಿಸುವ ಮಠ ಎಂದರೆ ಮುರುಘಾಮಠವಾಗಿದೆ. ಮನುಷ್ಯ



ಸರಳವಾಗಿ ಬದುಕಬೇಕು. ನವದಂಪತಿಗಳು ಇಂದು ಶ್ರೀಮಠದಲ್ಲಿ ಆದರ್ಶ ವಿವಾಹವಾಗಿ ಕುಟುಂಬಕ್ಕೆ ರಾಜ್ಯಕ್ಕೆ ಮಾದರಿಯಾಗಿದ್ದೀರಿ ಎಂದು ಸಂತಸ ವ್ಯಕ್ತಪಡಿಸಿದರು.

ವಿರಕ್ತಮಠದ ಡಾ.ಬಸವಪ್ರಭು ಸ್ವಾಮೀಜಿ ಮಾತನಾಡಿ, ದಾಂಪತ್ಯ ಜೀವನ ಸ್ವರ್ಗ ಆಗಬೇಕು. ಅತ್ತೆ-ಸೊಸೆ ಪ್ರೀತಿಯಿಂದ ಮಾತನಾಡಬೇಕು. ಪ್ರತಿಯೊಬ್ಬರು ಒಬ್ಬರಿಗೊಬ್ಬರು ಗೌರವ ಕೊಡಬೇಕು. ಕುಟುಂಬ, ತಂದೆ-ತಾಯಿ ಎಲ್ಲರನ್ನು ಪ್ರೀತಿಯಿಂದ ನೋಡಬೇಕು. ಪರಸ್ಪರರ ಮಧ್ಯೆ ದುರಹಂಕಾರ ಮೂಡಬಾರದು ಎಂದರು.ಗುರುಮಠಕಲ್‌ನ ಶ್ರೀ ಶಾಂತವೀರ ಗುರುಮುರುಘರಾಜೇಂದ್ರ ಸ್ವಾಮೀಜಿ ಮಾತನಾಡಿ, ಮದುವೆ ಮಾಡಿ ನೋಡು, ಮನೆ ಕಟ್ಟಿ ನೋಡು ಎಂಬಂತೆ ಎರಡೂ ಕಷ್ಟಗಳೇ. ಆದರೆ ನಮ್ಮಲ್ಲಿ ಸಾವಿರಾರು ವಿವಾಹಗಳಾಗಿವೆ. ಇದರ ಪ್ರಯೋಜನವನ್ನು ಜನರು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಶ್ರೀಮಠವು ಜನರು ತೊಂದರೆ ಅನುಭವಿಸಬಾರದು, ಸಾಲಕ್ಕೆ ಒಳಗಾಗಬಾರದು ಎಂಬ ಸದಾಶಯವನ್ನು ಹೊಂದಿ ಸಾಮೂಹಿಕ ಕಲ್ಯಾಣ ಮಹೋತ್ಸವವನ್ನು ನಡೆಸುತ್ತಿದೆ. ಇಂತಹ ಬೃಹತ್ ಅನುಭವ ಮಂಟಪದಲ್ಲಿ ವಿವಾಹ ನೆರವೇರುತ್ತಿದೆ. ಇದಕ್ಕೆ ಶ್ರೀಗಳೆಲ್ಲರು ಸಾಕ್ಷಿಯಾಗಿದ್ದಾರೆ ಎಂದರು.ಮಾನವ ಸಂಘಜೀವಿ. ಎಲ್ಲ ಪ್ರಾಣಿಗಳೂ ಸಹ ಒಟ್ಟಿಗೆ ಬಾಳುತ್ತವೆ. ಹಾಗೆಯೇ ಮನುಷ್ಯ ಒಂಟಿಯಾಗಿ ಬದುಕುವುದು ಸಾಧ್ಯವಿಲ್ಲ. ತನ್ನ ನೋವು ನಲಿವುಗಳನ್ನು ಹಂಚಿಕೊಳ್ಳಬೇಕಾದರೆ ಇತರರ ಜೊತೆ ಸಂಘಜೀವಿಯಾಗಿ ಬದುಕುವುದನ್ನು ಕಲಿಯಬೇಕು. ಮನುಷ್ಯ ಪರಸ್ಪರ ಸಾಮರಸ್ಯದಿಂದ ಬದುಕಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 5 ಜೋಡಿಗಳ ವಿವಾಹ ನೆರವೇರಿತು. ಕುವೆಂಪು ವಿಶ್ವವಿದ್ಯಾನಿಲಯದಿಂದ ಪಿಎಚ್.ಡಿ. ಮಹಾಪ್ರಬಂಧವನ್ನು ಮಂಡಿಸಿ ಡಾಕ್ಟರೇಟ್ ಪದವಿಗೆ ಭಾಜನರಾದ ಡಾ. ಬಸವಪ್ರಭು ಸ್ವಾಮೀಜಿಯವರನ್ನು ಶ್ರೀ ಮಠದಿಂದ ಹಾಗೂ ಲಿಂಗಾಯತ ನೌಕರರ ಬಳಗದಿಂದ ಸನ್ಮಾನಿಸಿ ಗೌರವಿಸಲಾಯಿತು. ಲಿಂಗಾಯತ ನೌಕರರ ಸಂಘದ ನೂತನ ಕ್ಯಾಲೆಂಡರನ್ನು ಬಿಡುಗಡೆ ಮಾಡಲಾಯಿತು.

ನಿಪ್ಪಾಣಿಯ ಶ್ರೀ ಬಸವ ಮಲ್ಲಿಕಾರ್ಜುನ ಸ್ವಾಮಿಗಳು, ಕೆ.ಆರ್.ನಗರದ ಶರಣೆ ಜಯದೇವಿತಾಯಿ, ಬಸವಕಲ್ಯಾಣದ ಶರಣೆ ಚಿನ್ಮಯಿತಾಯಿ ಮೊದಲಾದವರು ಭಾಗವಹಿಸಿದ್ದರು. ಬೆಂಗಳೂರಿನ ಎಂ.ಸಿ.ಕೆ.ಎಸ್. ಫೌಂಡೇಶನ್, ಕಾರ್ಯಕ್ರಮದ ದಾಸೋಹ ಸೇವೆಯನ್ನು ವಹಿಸಿಕೊಂಡಿದ್ದರು. ಜಮುರಾ ಕಲಾವಿದರು ಪ್ರಾರ್ಥಿಸಿದರು. ವಿಜಯದೇವರು ಸ್ವಾಗತಿಸಿದರು. ಟಿ.ಪಿ. ಜ್ಞಾನಮೂರ್ತಿ ನಿರೂಪಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T